ಸಂಪುಟ : 10 ಸಂಚಿಕೆ: 168 ಪುಟ : 4+2 ಬೆಲೆ: 3.00 ಶನಿವಾರ ಆಗಸ್ಟ್ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 168 Pages : 4+2 Price : 3.00 Saturday August 09 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಉಚಿತ ಆರೋಗ್ಯ ತಪಾಸಣಾ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಗದಗ**

ಅರಿವು ಫೌಂಡೇಶನ್ ಗದಗ, ಕೆ ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಶ್ರೀ ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಇವರ ಸಹಯೋಗದೊಂದಿಗೆ ಶ್ರೀ ಭದ್ರಕಾಳಮ್ಮ ದೇವಿ ಹಾಗೂ ಶ್ರೀ ವೀರಭದ್ರೇಶ್ವರ 73ನೇ ಜಾತ್ರಾ ಮಹೋತ್ಸವದ ಅಂಗವಾಗಿ ದಿ. ಸದಾನಂದ ಚನ್ನಪ್ಪ ಪಿಳ್ಳೆ ಸ್ಮರಣಾರ್ಥ ಆಗಸ್ಟ್ 9ರಂದು ಉಚಿತ ಆರೋಗ್ಯ ಶಿಬಿರವನ್ನು ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜನೆ ಮಾಡಲಾಗಿದೆ.

ಶಿಬಿರವನ್ನು ವಿ. ಪ ಸದಸ್ಯ ಎಸ್. ವ್ಹಿ ಸಂಕನೂರ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ರಾಜು ಖಾನಪ್ಪನವರ ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಯಾಗಿ ಮಾಜಿ ಶಾಸಕ ಡಿ. ಆರ್ ಪಾಟೀಲ, ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಚಿಕ್ಕ ಮಕ್ಕಳ ತಜ್ಞ ಡಾ. ಈರಣ್ಣ ಹಳೇಮನಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಬೆಂಗಳೂರಿನ ಕಾರ್ಖಾನೆಗಳ, ಬಾಯರ್‌ಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಮೋದ್ ಎಮ್, ಅತಿಥಿಗಳಾಗಿ ಶಿವಪುತ್ರಪ್ಪ ಬೇವಿನಮರದ, ಅರುಣ ಮುನವಳ್ಳಿ, ಭೀಮರಡ್ಡಿ ಕಿಲಬಣ್ಣವರ ಹಾಗೂ ರಾಚೋಟಿ ದೋಟ್ಯಾಳ ವೇದಿಕೆ ಹಂಚಿಕೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಆ.11ರಂದು ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನಲ್ಲಿ ಆಗಸ್ಟ್ 20 ರಂದು ಡಿ.ದೇವರಾಜ ಅರಸುರವರ 110ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಪ್ರಯುಕ್ತ ಜನಪ್ರತಿನಿಧಿಗಳ, ಸಂಘ-ಸಂಸ್ಥೆಗಳ ಹಾಗೂ ಅಧಿಕಾರಿಗಳ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಗಸ್ಟ್ 11ರಂದು ಸಂಜೆ 4 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಭೆ ಕರೆಯಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಭೇಟಿ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಬಾಕರ ಅವರು ಆಗಸ್ಟ್ 9ರಂದು ಬೆಳಿಗ್ಗೆ 9.30 ಗಂಟೆಗೆ ನಗರದ ಕಳಸಾಪೂರ ರಸ್ತೆಯಲ್ಲಿರುವ ರಾಕೇಶ ಸಿದ್ದರಾಮಯ್ಯ ಐಟಿಐ ಕಾಲೇಜಿಗೆ ಭೇಟಿ ನೀಡುವರು. ಈ ಸಂದರ್ಭದಲ್ಲಿ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಸೇರಿದಂತೆ ಸಮಾಜದ ಮುಖಂಡರು, ಗಣ್ಯಮಾನ್ಯರು ಉಪಸ್ಥಿತರಿರುವರು ಎಂದು ರಾಕೇಶ ಸಿದ್ದರಾಮಯ್ಯ ಐಟಿಐ ಕಾಲೇಜಿನ ಆಡಳಿತಾಧಿಕಾರಿ ರಾಮಕೃಷ್ಣ ರೊಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮತಗಳ್ಳತನ ವಿರೋಧಿಸಿ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಸಿ.ಎಂ ಸಿದ್ದರಾಮಯ್ಯ ಕಿಡಿ

# ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿಯಾಗಿದೆ



> ಮನುವಾದಿಗಳು ಸಂವಿಧಾನ ವಿರೋಧಿಗಳು. ಇವರು ಸಂವಿಧಾನದ ಪ್ರಕ್ರಿಯೆಯನ್ನೇ ತಪ್ಪುದಾರಿಗೆ ಎಳೆಯುತ್ತಿದ್ದಾರೆ. ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ವಂಚನೆಯ ಕಾರಣದಿಂದ ಸೆಂಟ್ರಲ್ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋತಿದೆಯೇ ಹೊರತು ಜನಾಭಿಪ್ರಾಯ ಕಾಂಗ್ರೆಸ್ ಪರವಾಗಿಯೇ ಇತ್ತು ಎನ್ನುವುದು ಈಗ ಗೊತ್ತಾಗಿದೆ.
>
> **– ಸಿದ್ದರಾಮಯ್ಯ.**
> ಮುಖ್ಯಮಂತ್ರಿಗಳು.

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನ ಆಗಿರುವ ಹಿನ್ನೆಲೆಯಲ್ಲಿ ನರೇಂದ್ರ ಮೋದಿಯವರಿಗೆ ಪ್ರಧಾನಿ ಕುರ್ಚಿಯಲ್ಲಿ ಕೂರುವ ನೈತಿಕ ಹಕ್ಕಿಲ್ಲ. ಈ ಕೂಡಲೇ ಅವರು ರಾಜೀನಾಮೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದರು.

ಲೋಕಸಭಾ ಚುನಾವಣೆಯಲ್ಲಿ ನಡೆದ ಚುನಾವಣಾ ಅಕ್ರಮ ಮತ್ತು ಮತಗಳ್ಳತನ ವಿರೋಧಿಸಿ ಫ್ರೀಡಂ ಪಾರ್ಕ್‌ನಲ್ಲಿ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಅವರು ಮಾತನಾಡಿದರು.

ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿಯಂತಾಗಿದೆ. ಮತಗಳ್ಳತನದ ವಿರುದ್ಧ ಕರ್ನಾಟಕ ರಾಜ್ಯದಿಂದ ಆರಂಭವಾಗಿರುವ ಪ್ರತಿಭಟನಾ ಅಭಿಯಾನ ಇಡೀ ದೇಶಾದ್ಯಂತ ವ್ಯಾಪಿಸಲಿದೆ. ರಾಹುಲ್ ಗಾಂಧಿಯವರು ಸಂಪೂರ್ಣವಾಗಿ ಅಧ್ಯಯನ ಮಾಡಿ, ಮತದಾನದ ಅಂಕಿ-ಅಂಶಗಳನ್ನು ಸಂಗ್ರಹಿಸಿ ವಿಶ್ಲೇಷಣೆ ಮಾಡಿ ದಾಖಲೆಗಳ ಸಮೇತ ದೇಶದ ಜನರ ಮುಂದೆ ಇಟ್ಟಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ವಿವರಿಸಿದರು. ಚುನಾವಣಾ ಆಯೋಗ ಸಂವಿಧನದ ಅಡಿಯಲ್ಲಿ ನ್ಯಾಯಬದ್ಧವಾಗಿ ನಡೆದುಕೊಳ್ಳಬೇಕು. ಸಂವಿಧಾನ ಕೊಟ್ಟಿರುವ ಮತದಾನದ ಮೂಲಭೂತ ಹಕ್ಕನ್ನು ಯಾರೂ ಕಿತ್ತುಕೊಳ್ಳಲು ಸಾಧ್ಯವಿಲ್ಲ. ಅದಕ್ಕೆ ದೇಶದ ಜನತೆ ಅವಕಾಶವನ್ನೂ ಕೊಡುವುದಿಲ್ಲ ಎಂದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ 14 ಸೀಟುಗಳನ್ನು ಗೆಲ್ಲಬೇಕಿತ್ತು. ಆದರೆ ಮತಕಳ್ಳತನದ ಕಾರಣದಿಂದ ನಾವು ಸೋತಿದ್ದೇವೆ. ಇವಿಎಂ ಬಂದ ಮೇಲೆ ಅದನ್ನು ದುರುಪಯೋಗಪಡಿಸಿಕೊಳ್ಳುವ ಕೆಲಸ ಆಗುತ್ತಿರುವುದು ಈಗ ದಾಖಲೆ ಸಮೇತ ಸಿಕ್ಕಿಬಿದ್ದಿದ್ದಾರೆ. ರಾಹುಲ್ ಗಾಂಧಿಯಿಂದ ಪ್ರಜಾಪ್ರಭುತ್ವ ಮತ್ತು ಸಂವಿಧಾನ ರಕ್ಷಣೆಗೆ ಚಳುವಳಿ ಆರಂಭವಾಗಿದೆ. ಇದಕ್ಕೆ ಇಡೀ ರಾಜ್ಯದ ಜನ ಬೆಂಬಲಕ್ಕೆ ನಿಲ್ಲಲಿದ್ದಾರೆ ಎಂದು ಅವರು ಘೋಷಿಸಿದರು.

### ಕಪ್ಪತ್ತಗಿರಿ ಶ್ರೀಕಾಂತ ಸ್ವಾಮೀಜಿಗಳ ಮೇಲೆ ಸುಳ್ಳು ಪ್ರಕರಣ ದಾಖಲು: ರಾಜು ಖಾನಪ್ಪನವರ ಆರೋಪ

# ಸ್ವಾಮೀಜಿಗಳಿಬ್ಬರೂ ನಮಗೆ ಎರಡು ಕಣ್ಣುಗಳಿದ್ದಂತೆ




> ಆಗಸ್ಟ್ 14ರಂದು ನಡೆಯುವ ಕಪ್ಪತ್ತಗಿರಿ ಮಲ್ಲಯ್ಯನ ಜಾತ್ರೆಯಲ್ಲಿ ಶ್ರೀಕಾಂತ ಸ್ವಾಮೀಜಿಗಳ ನೇತೃತ್ವದಲ್ಲಿ ಸಾವಿರಾರು ಭಕ್ತರೊಂದಿಗೆ ಜಾತ್ರಾ ಕಾರ್ಯಕ್ರಮದಲ್ಲಿ ಭಾಗಿಯಾಗಿ ತೇರಿಗೆ ಚಾಲನೆ ನೀಡುತ್ತೇವೆ. ಕೆಲವರು ತಮ್ಮ ರಾಜಕೀಯ ಪ್ರಭಾವ ಬಳಸಿ ಶ್ರೀಕಾಂತ ಸ್ವಾಮೀಜಿಗಳ ಮೇಲೆ ಸುಳ್ಳು ಪ್ರಕರಣ ದಾಖಲಿಸುವಂತೆ ಪ್ರೇರಣೆ ನೀಡಿದ್ದು ಮೇಲ್ನೋಟಕ್ಕೆ ಕಂಡುಬರುತ್ತಿದೆ.
>
> **–ರಾಜು ಖಾನಪ್ಪನವರ.**
> ಕಪ್ಪತ್ತಮಲ್ಲಯ್ಯನ ಭಕ್ತರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪತ್ತಗಿರಿ ಮಲ್ಲಯ್ಯ ದೇವಸ್ಥಾನದ ವಿಚಾರವಾಗಿ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಹಾಗೂ ಶ್ರೀಕಾಂತ ಸ್ವಾಮೀಜಿ ಸಹೋದರರಲ್ಲಿ ಭಿನ್ನಾಭಿಪ್ರಾಯ ಇದ್ದು, ಅದನ್ನು ಸರಿಪಡಿಸಲು ಅನೇಕ ಬಾರಿ ಪ್ರಯತ್ನಪಟ್ಟರೂ ವಿಫಲವಾಗಿದೆ. ಪ್ರಸ್ತುತ ದೇವಸ್ಥಾನಕ್ಕೆ ಭಕ್ತರಿಂದ ಸಾಕಷ್ಟು ಹಣ ಬರುತ್ತಿದ್ದು, ಮಲ್ಲಿಕಾರ್ಜುನ ಸ್ವಾಮೀಜಿ ತಮ್ಮ ಹಿಂಬಾಲಕರೊಂದಿಗೆ ಶಾಮೀಲಾಗಿ ಮುಂಡರಗಿ ಪೊಲೀಸ್ ಠಾಣೆಯಲ್ಲಿ ಅವರ ತಾಯಿ, ಅಕ್ಕ ಮತ್ತು ತಮ್ಮನ ವಿರುದ್ಧ ಜಾತಿ ನಿಂದನೆ ಪ್ರಕರಣ ದಾಖಲಿಸಿದ್ದಾರೆ ಎಂದು ಶಿವರಾಮಕೃಷ್ಣ ಸೇವಾ ಟ್ರಸ್ಟ್ ಗದಗ ಜಿಲ್ಲಾಧ್ಯಕ್ಷ ರಾಜು ಖಾನಪ್ಪನವರ ಆರೋಪಿಸಿದರು.


ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆಗಸ್ಟ್ 14ರಂದು ಕಪ್ಪತ್ತಮಲ್ಲಯ್ಯನ ಜಾತ್ರೆ ಇದ್ದು, ಈ ಜಾತ್ರೆಗೆ ಆಗಮಿಸದಂತೆ ಕಿರಿಯ ಸಹೋದರ ಶ್ರೀಕಾಂತ ಸ್ವಾಮೀಜಿ ಅವರಿಗೆ ಮುಂಚಿತವಾಗಿ 8 ದಿನಗಳ ಕಾಲ ಊರು ಬಿಡಲು ಮುಂಡರಗಿ ತಾಲೂಕಾ ದಂಡಾಧಿಕಾರಿಗಳು ಸೂಚಿಸಿದ್ದಾರೆ. ಇದರಿಂದ ನಮಗೆ ಸಂಶಯ ಹುಟ್ಟಿದೆ. ಸಾರ್ವಜನಿಕರಿಗೆ ಪಾರದರ್ಶಕವಾದ ಆಡಳಿತ ನೀಡಬೇಕಾದ ಅಧಿಕಾರಿಯೊಬ್ಬರು ಸ್ವಾಮೀಜಿಯ ಪರವಾಗಿ ನಿಂತಿದ್ದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಸಹೋದರರಾದ ಮಲ್ಲಿಕಾರ್ಜುನ ಸ್ವಾಮೀಜಿ ಹಾಗೂ ಶ್ರೀಕಾಂತ ಸ್ವಾಮೀಜಿ ಇಬ್ಬರೂ ನಮಗೆ 2 ಕಣ್ಣುಗಳಿದ್ದಂತೆ. ಭಕ್ತರಿಗೆ ಇಬ್ಬರ ನಡುವೆ ಯಾವುದೇ ಭೇದ-ಭಾವವಿಲ್ಲ. ಇವರ ಮಧ್ಯೆ ಇರುವ ಭಿನ್ನಾಭಿಪ್ರಾಯವನ್ನು ದೂರ ಮಾಡಲು ಗದಗ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳು ಮಧ್ಯೆ ಪ್ರವೇಶಿಸಿ ಇತ್ಯರ್ಥಗೊಳಿಸಬೇಕು ಎಂದು ರಾಜು ಖಾನಪ್ಪನವರ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಶಿವರಾಮಕೃಷ್ಣ ಸೇವಾ ಟ್ರಸ್ಟ್‌ನ ಸದಸ್ಯರಾದ ಶಿವು ಹಿರೇಮಠ, ಹುಲಗಪ್ಪ ವಾಲ್ಮೀಕಿ, ಕುಮಾರ ನಡಗೇರಿ, ಮರಿಯಪ್ಪ ಲದ್ದಿ, ಕಿರಣ ಹಿರೇಮಠ, ಮಹಾಂತೇಶ ಹೊನ್ನಪ್ಪನವರ ಮುಂತಾದವರು ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಕಾನೂನು , ನ್ಯಾಯ , ಮಾನವ ಹಕ್ಕುಗಳು , ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ.ಪಾಟೀಲ ಅವರು ಆಗಸ್ಟ್ 9 ಹಾಗೂ 10 ರಂದು ಜಿಲ್ಲಾ ಪ್ರವಾಸ ಕೈಗೊಳ್ಳುತ್ತಿದ್ದು ವಿವರ ಇಂತಿದೆ.

ಆಗಸ್ಟ್ 9 ರಂದು ಬೆಳಿಗ್ಗೆ 6.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 7.30 ಗದುಗಿಗೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶ್ರೀ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12 ಗಂಟೆಗೆ ಬೆಟಗೇರಿ ಪಶು ಆಸ್ಪತ್ರೆ – ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಮುಳಗುಂದ ದಾವಲ ಮಲಿಕ್ ಪಹಾಡದಲ್ಲಿ ಶಾಲಾ ಕೊಠಡಿಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಗದಗನಲ್ಲಿ ವಾಸ್ತವ್ಯ ಮಾಡುವರು.

ಆ. 10 ರಂದು ಬೆಳಿಗ್ಗೆ 10 ಗಂಟೆಗೆ ಗದಗ ದುಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ದುಂಡಪ್ಪ ಮಾನ್ವಿ ಮಹಿಳಾ ಮತ್ತುಮಕ್ಕಳ ಆಸ್ಪತ್ರೆ ಹಾಗೂ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳ ಕುಂದುಕೊರತೆ ಸಭೆ ಜರುಗಿಸುವರು. ಮಧ್ಯಾಹ್ನ 12.30 ಗಂಟೆಗೆ ನಾಗಾವಿ ತಾಂಡಾದಲ್ಲಿ ನಾಗದೇವತೆ ದೇವಸ್ಥಾನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ರಾತ್ರಿ 9 ಗಂಟೆಗೆ ಗದಗ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಆ.14ರಂದು ತಾಲೂಕ ಮಟ್ಟದ ತ್ರೈಮಾಸಿಕ ಗ್ಯಾರಂಟಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಸಭೆಯನ್ನು ಆಗಸ್ಟ್ 14 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿನ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಕಾರ್ಯಾಲಯದಲ್ಲಿ ಏರ್ಪಡಿಸಲಾಗಿದೆ ಎಂದು ಗದಗ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಹಬ್ಬದ ಸಂಭ್ರಮವನ್ನೂ ಕಸಿದ ಮಳೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ 3-4 ದಿನಗಳಿಂದ ಗುಡುಗು-ಸಿಡಿಲಬ್ಬರದೊಂದಿಗೆ ಸುರಿಯುತ್ತಿರುವ ಮಳೆ ರೈತ ಸಮುದಾಯದಲ್ಲಿ ಸಂತಸದ ಜತೆಗೆ ಆತಂಕವನ್ನೂ ಸೃಷ್ಟಿಸುತ್ತಿದೆ. ರೈತ ಕೃಷಿ ಮಾನ್ಸೂನ್ ಮಳೆಯೊಂದಿಗಿನ ಜೂಜಾಟವಾಗಿದೆ ಎಂಬ ಮಾತು ಪರಿಸ್ಥಿತಿಯನ್ನು ಸಾಕ್ಷೀಕರಿಸುವಂತಾಗಿದೆ.

ಶುಕ್ರವಾರವೂ ಪಟ್ಟಣ ಸೇರಿ ತಾಲೂಕಿನಾದ್ಯಂತ ಉತ್ತಮ ಮಳೆ ಮುಂದುವರೆದಿದ್ದು, ಇದರಿಂದ ಕೃಷಿ ಚಟುವಟಿಕೆಗಳು ಸಂಪೂರ್ಣ ಸ್ಥಗಿತಗೊಂಡಿವೆ. ಈಗಾಗಲೇ ಜಮೀನುಗಳಲ್ಲಿ ನೀರು ನಿಂತು ಬೆಳೆ ಹಾನಿಯಾಗುವ ಆತಂಕದ ಜತೆಗೆ ಹಬ್ಬದ ಸಂಭ್ರಮವನ್ನೂ ಕಸಿದಿದೆ. ಶುಕ್ರವಾರ ಸಂತೆ ದಿನವಾದ್ದರಿಂದ ತರಕಾರಿ ಸೇರಿ ಎಲ್ಲ ಬಗೆಯ ವ್ಯಾಪಾರಸ್ಥರು, ಸಂತೆಗೆ ಬಂದಿದ್ದ ಗ್ರಾಮೀಣ ಜನರು ಊರು ಸೇರಲು ಪರದಾಡಿದರು.

ಸದ್ಯ ಮುಂಗಾರಿನ ಎಲ್ಲ ಬೆಳೆಗಳು ಫಲ ಬಿಡುವ ಹಂತದಲ್ಲಿದ್ದು, ನಿರಂತರ ಮಳೆಗೆ ತಗ್ಗು ಪ್ರದೇಶಗಳಲ್ಲಿನ ಒಂದಷ್ಟು ಬೆಳೆಯೂ ಹಾನಿಗೀಡಾಗುತ್ತದೆ. ಈಗಾಗಲೇ ಹೆಸರು ಬೆಳೆ ಕಟಾವಿಗೆ ಬಂದಿದ್ದು, ಮಳೆ ಬಿಡುವು ಕೊಡದಿದ್ದರೆ ಹೆಸರು ಕಟಾವು/ಒಕ್ಕಲಿಗೆ ಅಡಚಣೆಯಾಗಿ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗುತ್ತದೆ. ಅಲ್ಲದೇ ಅತಿಯಾದ ತೇವಾಂಶ ಶೇಂಗಾ, ಹತ್ತಿ, ಮೆಣಸಿನಕಾಯಿ, ಈರುಳ್ಳಿ ಎಲ್ಲ ಬೆಳೆಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ. ಮಳೆಗಾಗಿ ಕಾದ ರೈತರು ಈಗ ಮಳೆ ಬಿಡುವಿಗಾಗಿ ಬೇಡುವಂತಾಗಿದೆ.

ಲಕ್ಷ್ಮೇಶ್ವರ ಸೇರಿ ತಾಲೂಕಿನ ಎಲ್ಲ ಭಾಗದಲ್ಲಿ ಸುರಿದ ಮಳೆಯಿಂದಾಗಿ ಕೆರೆ-ಕಟ್ಟೆಗಳು, ಕೃಷಿ ಹೊಂಡ, ಹಳ್ಳಗಳು ತುಂಬಿ ಹರಿದಿವೆ. ತಗ್ಗು ಪ್ರದೇಶಗಳಲ್ಲಿನ ಜಮೀನುಗಳಲ್ಲಿ ನೀರು ಹರಿದು, ಸಂಗ್ರಹವಾಗಿ ಒಂದಷ್ಟು ಬೆಳೆ ಜಲಾವೃತವಾಗಿದೆ. ಪಟ್ಟಣ ಸೇರಿ ತಾಲೂಕಿನಲ್ಲಿ ಈಗಾಗಲೇ ಹಲವು ಮನೆಗಳು ಕುಸಿದಿದ್ದು, ಇದು ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯೂ ಇಲ್ಲದಿಲ್ಲ.

## ಹರ್ ಘರ್ ತಿರಂಗಾ ಯಾತ್ರೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**



ಭಾರತೀಯ ಜನತಾ ಪಾರ್ಟಿ ವತಿಯಿಂದ ಆಗಸ್ಟ್ 9ರ ಮಧ್ಯಾಹ್ನ 12.30 ಗಂಟೆಗೆ ಗದಗ, ಧಾರವಾಡ, ಹಾವೇರಿ ವಿಭಾಗ ಮಟ್ಟದ ಹರ್ ಘರ್ ತಿರಂಗಾ ಯಾತ್ರೆ ಕಾರ್ಯಕ್ರಮವು ನರಗುಂದದಲ್ಲಿ ಜರುಗಲಿದೆ.

ಈ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಸಂಸದರು, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಶಾಸಕರು, ಮಾಜಿ ಸಚಿವರಾದ ಸಿ.ಸಿ. ಪಾಟೀಲ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಿಧಾನಸಭೆಯ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಶಾಸಕರಾದ ಮಹೇಶ ಟೆಂಗಿನಕಾಯಿ, ಡಾ. ಚಂದ್ರು ಲಮಾಣಿ, ಎಂ.ಆರ್. ಪಾಟೀಲ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ಒಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ, ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಮಹೇಶ ಕೌತಾಳ, ವಿಭಾಗದ ಹಾಲಿ ಹಾಗೂ ಮಾಜಿ ಶಾಸಕರು, ಸಚಿವರು, ಚುನಾಯಿತ ಪ್ರತಿನಿಧಿಗಳು ಉಪಸ್ಥಿತರಿರುವರು ಎಂದು ಅಭಿಯಾನದ ಜಿಲ್ಲಾ ಸಂಚಾಲಕ ಆರ್.ಕೆ. ಚವ್ಹಾಣ, ಸಹ-ಸಂಚಾಲಕ ರಾಘವೇಂದ್ರ ಯಳವತ್ತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಪಾದಕೀಯ

# ಮತ್ತೊಮ್ಮೆ ಜಾತಿಗಣತಿ ನಿರ್ಧಾರ ಸ್ವಾಗತಾರ್ಹ

ಕರ್ನಾಟಕದಲ್ಲಿ ಮತ್ತೊಮ್ಮೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ (ಜಾತಿಗಣತಿ) ನಡೆಸಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿರುವುದು ಒಂದು ಮಹತ್ವದ ಹೆಜ್ಜೆಯಾಗಿದೆ. ಈ ಸಮೀಕ್ಷೆಯನ್ನು ಡಿಜಿಟಲ್ ರೂಪದಲ್ಲಿ ನಡೆಸಲು ನಿರ್ಧರಿಸಲಾಗಿದ್ದು, ಇದು ಮಾಹಿತಿ ಸಂಗ್ರಹಣೆಯಲ್ಲಿ ಪಾರದರ್ಶಕತೆ ಮತ್ತು ನಿಖರತೆಯನ್ನು ಹೆಚ್ಚಿಸಬಹುದು.

ಈ ಬಾರಿ ಸಮೀಕ್ಷೆಯಲ್ಲಿ ಹೊಸ ಅಂಶಗಳನ್ನು ಸೇರಿಸಲಾಗಿದೆ. 6 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ವ್ಯಕ್ತಿಯ ಆಧಾರ್ ದೃಢೀಕರಣವನ್ನು ಕಡ್ಡಾಯಗೊಳಿಸಲಾಗಿದೆ. ಇದು ಸಮೀಕ್ಷೆಯ ಮಾಹಿತಿಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ. ಅಲ್ಲದೆ, ಮತದಾರರ ಪಟ್ಟಿಯನ್ನು ಬಳಸಿಕೊಂಡು ಸಮೀಕ್ಷೆ ನಡೆಸಲು ಅನುಮತಿ ನೀಡಲಾಗಿದೆ,

ಇದರಿಂದ ಯಾವುದೇ ಅರ್ಹ ವ್ಯಕ್ತಿಗಳು ಸಮೀಕ್ಷೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಲು ಸಾಧ್ಯವಾಗುತ್ತದೆ.

ಈ ಸಮೀಕ್ಷೆಗೆ ಆರ್ಥಿಕ ಇಲಾಖೆಯು 624 ಕೋಟಿ ಅನುಮೋದನೆ ನೀಡಿದ್ದು, ಸರ್ಕಾರದ ಬದ್ಧತೆಯನ್ನು ತೋರಿಸುತ್ತದೆ.

ಇ-ಆಡಳಿತ ಇಲಾಖೆಯು ಈ ಸಮೀಕ್ಷೆಗಾಗಿ ಅಗತ್ಯ ತಂತ್ರಾಂಶ ಮತ್ತು ಅಪ್ಲಿಕೇಶನ್‌ಗಳನ್ನು ಅಭಿವೃದ್ಧಿಪಡಿಸಲಿದೆ. ಶಿಕ್ಷಕರು, ಅಧಿಕಾರಿಗಳು ಮತ್ತು ಇತರ ಸಿಬ್ಬಂದಿ ವರ್ಗಕ್ಕೆ ಸೂಕ್ತ ತರಬೇತಿಯನ್ನು ನೀಡಿ, ಸಮೀಕ್ಷೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಆಯೋಗದ ಮೇಲುಸ್ತುವಾರಿಯಲ್ಲಿ ಕಾರ್ಯನಿರ್ವಹಿಸಲಾಗುವುದು.

ಈ ಸಮೀಕ್ಷೆಯು ರಾಜ್ಯದ ಜಾತಿ, ಸಮುದಾಯ ಮತ್ತು ಆರ್ಥಿಕ ಸ್ಥಿತಿಗತಿಯ ಕುರಿತು ನಿಖರವಾದ ಚಿತ್ರಣವನ್ನು ನೀಡಲು ಸಹಾಯ ಮಾಡುತ್ತದೆ. ಈ ಮಾಹಿತಿಯನ್ನು ಆಧರಿಸಿ, ಸರ್ಕಾರವು ಶೈಕ್ಷಣಿಕ, ಸಾಮಾಜಿಕ, ಮತ್ತು ಆರ್ಥಿಕವಾಗಿ ಹಿಂದುಳಿದ ಸಮುದಾಯಗಳಿಗೆ ಅಗತ್ಯವಿರುವ ಯೋಜನೆಗಳನ್ನು ರೂಪಿಸಬಹುದು.

ಆದರೆ, ಈ ಸಮೀಕ್ಷೆಯನ್ನು ವಿಳಂಬವಿಲ್ಲದೆ, ಪಾರದರ್ಶಕವಾಗಿ ಮತ್ತು ರಾಜಕೀಯ ಹಸ್ತಕ್ಷೇಪವಿಲ್ಲದೆ ನಡೆಸಲು ಸರ್ಕಾರವು ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳುವುದು ಅವಶ್ಯಕ.

ಈ ಮೂಲಕ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಹೊಸ ದಾರಿ ಸಿಗಲಿದೆ.

---

### ಶ್ರೇಷ್ಠ ಭಾವನೆಗಳ ಹಬ್ಬ ಕೇವಲ ಆಚರಣೆಗೆ ಮಾತ್ರ ಸೀಮಿತವಾಗದಿರಲಿ

# ಸೋದರತೆಯ ಶ್ರೀರಕ್ಷೆ 'ರಕ್ಷಾ ಬಂಧನ'

**ಹೆಣ್ಣಿನ ಜನುಮಕ ಅಣ್ಣ ತಮ್ಮರು ಬೇಕ**
**ಬೆನ್ನ ಕಟ್ಟುವರು ಸಭೆಯೊಳಗ ॥**
**ಸಾವಿರ ಹೊನ್ನ ಕಟ್ಟುವರು ಉಡಿಯೊಳಗ..**



ಜನಪದರ ಈ ಜಾಣನುಡಿಗಳಲ್ಲಿ ಸಹೋದರ ಬಾಂಧವ್ಯದ ಅಮರ-ಮಧುರ ಬಂಧುರವನ್ನು ನಾವು ಕಾಣಬಹುದು. ಅಣ್ಣ-ತಂಗಿಯ, ಅಕ್ಕ-ತಮ್ಮನ ಬಂಧನಕ್ಕೆ ಬೆಲೆ ಕಟ್ಟಲಾಗದು. ಅದು ಅಂತರಂಗವನ್ನು ಆವರಿಸಿಕೊಂಡ ಅನುಬಂಧದ ಅನುಭೂತಿ. ಮನೆಯಲ್ಲಿ ಅಣ್ಣ ಅಥವಾ ತಮ್ಮನ ಹಂಬಲಕೆ ತಂಗಿ ಅಥವಾ ಅಕ್ಕ ಯಾವಾಗಲೂ ಬೆಂಬಲವಾಗಿ ನಿಲ್ಲುವ ಭಾವನಾತ್ಮಕ ಬಲ. ಇಂತಹ ಸಹೋದರ ಮತ್ತು ಸಹೋದರಿಯ ಮಧುರ ಬಾಂಧವ್ಯ ಸಾರುವ ಹಾಗೂ ಮತ್ತಷ್ಟು ಬಂಧುರಗೊಳಿಸುವ ಭಾವನಾತ್ಮಕ ಹಬ್ಬವೇ 'ರಕ್ಷಾ ಬಂಧನ'.

ಅಣ್ಣನ ಕೈಗೆ ತಂಗಿ ಅಥವಾ ತಮ್ಮನ ಕೈಗೆ ಅಕ್ಕ ರಾಖಿ ಕಟ್ಟುವ ಮೂಲಕ ಸಹೋದರ ತನಗೆ ರಕ್ಷಾ ಬಂಧದ ಸುರಕ್ಷತೆಯನ್ನು ನೀಡುತ್ತಾನೆ ಎಂಬ ನಂಬಿಕೆಯ ಅಭಯ ಧರಿಸುತ್ತಾಳೆ. ಅದೇ ರೀತಿ ಸಹೋದರಿಯ ಭಾವನಾತ್ಮಕ ಬಾಂಧವ್ಯದ ಅಭಿರಕ್ಷೆ ಸಹೋದರನಿಗೆ. ರಕ್ಷಾ ಬಂಧನ ಹಬ್ಬವನ್ನು ರಾಷ್ಟ್ರದೆಲ್ಲೆಡೆಯಲ್ಲಿ ಸಂಭ್ರಮದಿಂದ ಆಚರಿಸುತ್ತಾರೆ. ಇದು ಹಿಂದೂಗಳ ಹಬ್ಬವಾದರೂ ಹೆಚ್ಚಿನ ಧರ್ಮಗಳಲ್ಲಿ ಇದನ್ನು ಆಚರಿಸಲಾಗುತ್ತದೆ. ಈ ದಿನ ಸೋದರಿಯು ತನ್ನ ಸೋದರನ ಕೈಗೆ ರಕ್ಷೆಯ ದಾರವನ್ನು ಕಟ್ಟುತ್ತಾಳೆ. ಅದನ್ನೇ ರಾಖಿ ಎಂದು ಕರೆಯಲಾಗುತ್ತದೆ. ಈ ದಾರವನ್ನು ಕಟ್ಟುವ ವೇಳೆ ತಂಗಿ ತನ್ನ ಅಣ್ಣನಿಗೆ ದೀರ್ಘಾಯುಷ್ಯ, ಆರೋಗ್ಯವು ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತಾಳೆ.

ಇದಕ್ಕೆ ಪ್ರತಿಯಾಗಿ ಸಹೋದರನು ಕೂಡ ತನ್ನ ಸಹೋದರಿಯನ್ನು ಯಾವುದೇ ಕಷ್ಟದ ಪರಿಸ್ಥಿತಿಯಲ್ಲೂ ರಕ್ಷಿಸುವ ಭರವಸೆಯನ್ನು ನೀಡುತ್ತಾನೆ. ಅಷ್ಟೇ ಅಲ್ಲದೇ ತನ್ನ ಪ್ರೀತಿಯ ತಂಗಿಗೆ ಇಷ್ಟವಾಗಿರುವ ಉಡುಗೊರೆ ನೀಡುತ್ತಾನೆ. ರಕ್ಷಾಬಂಧನ ಎಂಬುದರಲ್ಲಿ ಎರಡು ಪದಗಳಿವೆ. ಒಂದು 'ರಕ್ಷಾ' ಮತ್ತು 'ಬಂಧನ'. ರಕ್ಷಾ ಎಂದರೆ ರಕ್ಷಣೆ ಮತ್ತು ಬಂಧನ ಎಂದರೆ ಬಂಧವೆಂದರ್ಥ. ಅಣ್ಣ-ತಂಗಿ ಇಬ್ಬರು ಪರಸ್ಪರ ಹಂಚಿಕೊಳ್ಳುವ ಪ್ರೀತಿ ಯಾವತ್ತೂ ಕೊನೆಗೊಳ್ಳದು.

ಭಾರತೀಯ ಪರಂಪರೆಯಲ್ಲಿ ಪ್ರತಿಯೊಂದು ಹಬ್ಬವೂ ಪೌರಾಣಿಕವಾಗಿ ತನ್ನದೇ ಆದ ಹಿನ್ನೆಲೆ ಹೊಂದಿರುತ್ತದೆ. ಅದೇ ರೀತಿ ರಕ್ಷಾ ಬಂಧನಕ್ಕೂ ಕೂಡ ಮಹಾಭಾರತ ಹಾಗೂ ಅದಕ್ಕಿಂತ ಹಿಂದಿನ ಹಿನ್ನೆಲೆ ಇದೆ. ಭಗವಾನ್ ಕೃಷ್ಣನು ಶಿಶುಪಾಲನನ್ನು ಕೊಲ್ಲಲು ತನ್ನ ಸುದರ್ಶನ ಚಕ್ರವನ್ನು ಬಳಸುತ್ತಾನೆ. ಈ ವೇಳೆ ಆತನ ಕೈ ಬೆರಳಿಗೆ ಗಾಯವಾಗುತ್ತದೆ. ಎಲ್ಲರೂ ಕೈಬೆರಳಿಗೆ ಕಟ್ಟಲು ಬಟ್ಟೆಯನ್ನು ತರಲು ಹೋಗುತ್ತಾರೆ. ಆದರೆ ದ್ರೌಪದಿ ತನ್ನ ಸೀರೆಯ ಒಂದು ತುಂಡನ್ನು ಕತ್ತರಿಸಿ ರಕ್ತ ಸುರಿಯುತ್ತಿರುವ ಕೃಷ್ಣನ ಕೈಗೆ ಕಟ್ಟುತ್ತಾಳೆ. ಇದಕ್ಕೆ ಪ್ರತಿಫಲವನ್ನು ನೀಡಿದ ಶ್ರೀಕೃಷ್ಣ ಹಸ್ತಿನಾಪುರದ ಅರಮನೆಯಲ್ಲಿ ದುಶ್ಯಾಸನ ದ್ರೌಪದಿಯ ಸೀರೆಯನ್ನು ಎಳೆದಾಗ ಅದು ಎಳೆದಷ್ಟು ಉದ್ದವಾಗುವಂತೆ ಮಾಡಿ ದ್ರೌಪದಿಯ ಮಾನ ಕಾಪಾಡುತ್ತಾನೆ. ಆ ರಕ್ಷಾ ನೂಲು ರಕ್ಷಾ ಬಂಧನಕ್ಕೆ ನಾಂದಿಯಾಯಿತು.


ಇನ್ನೊಂದು ಪೌರಾಣಿಕ ಹಿನ್ನೆಲೆಯಿದೆ. ಅಸುರನಿಂದ ಸೋಲಿಸಲ್ಪಟ್ಟ ಇಂದ್ರನಿಗೆ ತನ್ನ ಶತ್ರುಗಳಿಂದ ರಕ್ಷಣೆ ಪಡೆಯಬೇಕಾದರೆ ಕೈಗೆ ರಾಖಿ ಕಟ್ಟಿಕೊಳ್ಳಬೇಕು ಎಂದು ಬೃಹಸ್ಪತಿ ಹೇಳಿದರು. ಬೃಹಸ್ಪತಿಯ ಮಾತಿನಂತೆ ಇಂದ್ರನ ಒಡನಾಡಿ ಶಚಿ ದೇವಿಯು ಇಂದ್ರನಿಗೆ ರಾಖಿ ಕಟ್ಟಿದಳು ಎಂದು ಪುರಾಣದಲ್ಲಿದೆ.

ಐತಿಹಾಸಿಕವಾಗಿಯೂ ರಕ್ಷಾಬಂಧನದ ಪರಂಪರೆಯನ್ನು ನಾವು ಕಾಣಬಹುದಾಗಿದೆ. ಇತಿಹಾಸದ ಪ್ರಕಾರ ಅಲೆಕ್ಸಾಂಡರನು ಭಾರತದ ಮೇಲೆ ದಂಡೆತ್ತಿ ಬಂದಾಗ ಅವನನ್ನು ಧೈರ್ಯದಿಂದ ಎದುರಿಸಿದವನು ಪೋರಸ್. ಆಗ ಅವರಿಬ್ಬರ ನಡುವೆ ಯುದ್ಧ ಆರಂಭಗೊಂಡಿತು. ಇದೇ ಸಮಯದಲ್ಲಿ ಅಲೆಕ್ಸಾಂಡರನ ಪತ್ನಿ ರೊಕ್ಸಾನಳು ಪೋರಸ್‌ಗೆ ಒಂದು ಪವಿತ್ರ ದಾರವನ್ನು (ರಾಖಿ) ಕಳುಹಿಸಿದಳು. ಅದರ ಜೊತೆಗೆ ಒಂದು ಮನವಿ ಸಹ ಇತ್ತು. ತನ್ನ ಪತಿಯನ್ನು ಕೊಲ್ಲದಿರುವಂತೆ ಕೇಳಿಕೊಂಡ ಮನವಿ ಅದಾಗಿತ್ತು. ಮುಂದೆ ನಡೆದ ಯುದ್ಧದಲ್ಲಿ ಪೋರಸ್ ಅಲೆಕ್ಸಾಂಡರನನ್ನು ಕೊಲ್ಲದೆ ಉಳಿಸಿದನು. ಇದಕ್ಕೆ ಕಾರಣ ಆತನ ಕೈಯಲ್ಲಿ ಆತ ಕಟ್ಟಿಕೊಂಡಿದ್ದ ರಾಖಿ ಅವನನ್ನು ತಡೆದು ನಿಲ್ಲಿಸಿತ್ತು.

ರಕ್ಷಾಬಂಧನಕ್ಕೆ ಭಾರತದಲ್ಲಿ ಭಾವನಾತ್ಮಕ ಮಹತ್ವವಿದೆ. ಸಹೋದರ-ಸಹೋದರಿಯರ ನಡುವಿನ ಪ್ರೀತಿಗೆ ಈ ದಿನ ಸಮರ್ಪಣೆ. ಇದು ಸಹೋದರಿ ಮತ್ತು ಸಹೋದರರ ನಡುವಿನ ಪ್ರೀತಿಯನ್ನು ಬಲಪಡಿಸುವ ಮತ್ತು ಪುನರುಚ್ಚರಿಸುವ ಉತ್ಸವ. ಒಂದು ಕಡೆ, ಸಹೋದರನು ತನ್ನ ಸಹೋದರಿಯನ್ನು ನೋಡಿಕೊಳ್ಳುವುದಾಗಿ ಮತ್ತು ತನ್ನ ಜೀವನಪರ್ಯಂತ ಅವಳನ್ನು ರಕ್ಷಿಸುವುದಾಗಿ ಭರವಸೆ ನೀಡುತ್ತಾನೆ. ಮತ್ತೊಂದೆಡೆ, ಸಹೋದರಿ ತನ್ನ ಸಹೋದರನ ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸುತ್ತಾಳೆ.

ಈ ದಿನದಂದು ಸಹೋದರಿ ತನ್ನ ಸಹೋದರರ ಮಣಿಕಟ್ಟಿನ ಮೇಲೆ ಕಟ್ಟುವ ನೂಲಿನ ದಾರವು ಕೇವಲ ಒಂದು ದಾರವಲ್ಲ. ಅದು ಇಬ್ಬರ ನಡುವಿನ ಶುದ್ಧ, ಪವಿತ್ರ ಮತ್ತು ನಿರಂತರ ಪ್ರೀತಿಯ ಗುರುತು. ಜೊತೆಗೆ ಶಾಶ್ವತ ರಕ್ಷಣೆಗಾಗಿ ಮಂತ್ರದೊಂದಿಗೆ ಬೆರೆತಿದೆ. ಸಹೋದರಿ ಮದುವೆಯಾದಾಗಲೂ, ಸಹೋದರಿಯರ ಮನೆಗೆ ಭೇಟಿ ನೀಡಿ ಮತ್ತು ಆಕೆಯಿಂದ ರಾಖಿಯನ್ನು ಕಟ್ಟಿಸಿಕೊಳ್ಳುವುದನ್ನು ಸಹೋದರ ಮರೆಯುವುದಿಲ್ಲ.

ಮನೆಯಲ್ಲಿ ಒಬ್ಬಳೇ ಹೆಣ್ಣು ಮಗಳಿದ್ದರೆ ಅಥವಾ ಸಹೋದರನನ್ನು ಹೊಂದಿರದಿದ್ದರೆ ಸಾಮಾನ್ಯವಾಗಿ ಸೋದರ ಸಂಬಂಧಿ ಅಥವಾ ಅವಳು ತನ್ನ ಸಹೋದರ ಎಂದು ಹೇಳಿಕೊಳ್ಳುವ ಯಾರೊಂದಿಗಾದರೂ ಆಚರಣೆಗಳನ್ನು ಮಾಡುತ್ತಾರೆ. ಈ ಹಬ್ಬವು ಒಡಹುಟ್ಟಿದವರು ಒಟ್ಟಿಗೆ ಬೆಳೆಯುವ ಮಹತ್ವವನ್ನು ಅರಿತುಕೊಳ್ಳಲು ಸಹಾಯ ಮಾಡುತ್ತದೆ. ಇಂತಹ ಶ್ರೇಷ್ಠ ಭಾವನೆಗಳ ಈ ಹಬ್ಬ ಕೇವಲ ಆಚರಣೆಗೆ ಮಾತ್ರ ಸೀಮಿತವಾಗದಿರಲಿ. ಭಾವನೆಗಳಲ್ಲಿಯೂ ಇದು ಬಲಗೊಳ್ಳಲಿ.



**- ಈಶ್ವರ ಎಸ್.ಮೆಡ್ಲೇರಿ.**
ಅಧ್ಯಕ್ಷರು, ತಾಲೂಕಾ ಕಸಾಪ- ಲಕ್ಷ್ಮೇಶ್ವರ.

---

# ಮತದಾರರ ಪಟ್ಟಿ ತಯಾರಿಯಲ್ಲಿ ಮೋದಿ ಪಾತ್ರ ಇಲ್ಲ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮತದಾರರ ಪಟ್ಟಿ ತಯಾರಿಯಲ್ಲಿ ಮೋದಿ ಪಾತ್ರ ಇಲ್ಲ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮತದಾರರ ಪಟ್ಟಿ ತಯಾರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅಥವಾ ಬಿಜೆಪಿ ನಾಯಕರ ಪಾತ್ರವೇ ಇಲ್ಲ. ಇದನ್ನು ಅಧಿಕಾರಿಗಳೇ ತಯಾರು ಮಾಡುತ್ತಾರೆ.

ಹೀಗಾಗಿ ರಾಹುಲ್ ಗಾಂಧಿಯದ್ದು ಆಟಂ ಬಾಂಬ್ ಅಲ್ಲ. ಹೊಸೂರಿನಲ್ಲಿ ತಯಾರಾದ ಹಳೇ ಟುಸ್ ಪಟಾಕಿಯಾಗಿದೆ.

ರಾಜ್ಯದಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಪ್ರತಿ ಬೂತ್‌ಗೆ ಬಿಎಲ್‌ಎಗಳನ್ನು ಕಾಂಗ್ರೆಸ್ ನೀಡಿದೆ. ಮತದಾರರ ಪಟ್ಟಿಯ ಮೊದಲ ಪ್ರತಿಯನ್ನು ಬಿಎಲ್‌ಎಗೆ ನೀಡಲಾಗುತ್ತದೆ. ಅವರನ್ನು ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರೇ ನೇಮಿಸಿದ್ದಾರೆ.

---

# 'ಶಾಸಕಾಂಗ ಶೃಂಗಸಭೆ-2025'



**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಅಮೆರಿಕದ ಶಿಕ್ಷಣ ಕ್ಷೇತ್ರದಲ್ಲಿನ ವಿನೂತನ ಯೋಜನೆಗಳು ಹಾಗೂ ಆರೋಗ್ಯ ಕ್ಷೇತ್ರದಲ್ಲಿನ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆ ಮುಂತಾದ ವ್ಯವಸ್ಥೆಗಳನ್ನು ಅಳವಡಿಸಿಕೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಸಲಹೆ ನೀಡುವುದಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಅಮೇರಿಕಾದ ಬೋಸ್ಟನ್ ನಗರದಲ್ಲಿ 'ಶಾಸಕಾಂಗ ಶೃಂಗಸಭೆ-2025'ರ ನೇಪಥ್ಯದಲ್ಲಿ ನಡೆದ ವಿಚಾರ ಗೋಷ್ಠಿಯಲ್ಲಿ ಅಮೆರಿಕದ ಶಿಕ್ಷಣ ಮತ್ತು ಆರೋಗ್ಯ ವ್ಯವಸ್ಥೆಗಳ ಹೋಲಿಕೆ ಮತ್ತು ನಮ್ಮ ದೇಶದ ಶಿಕ್ಷಣ ಮತ್ತು ಆರೋಗ್ಯ ವ್ಯವಸ್ಥೆಯನ್ನು ನಿರ್ದಿಷ್ಟವಾಗಿ ಸಂಪರ್ಕಿಸುವಲ್ಲಿ ಶಾಸಕಾಂಗದ ಪಾತ್ರಗಳ ಕುರಿತು ಸಭಾಪತಿ ಬಸವರಾಜ ಹೊರಟ್ಟಿ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶೈಕ್ಷಣಿಕ ವ್ಯವಸ್ಥೆಗೆ ಅನುಗುಣವಾಗಿ ಸಮಗ್ರ ರಾಜ್ಯದ ಶಾಲಾ ಶಿಕ್ಷಣಕ್ಕೆ ಗುಣಮಟ್ಟದ ಶಿಕ್ಷಣ ವ್ಯವಸ್ಥೆಯನ್ನು ಸಂಯೋಜಿಸುವುದರಿಂದ ನಮ್ಮ ವಿದ್ಯಾರ್ಥಿಗಳಿಗೆ ಜಗತ್ತಿನ ಉನ್ನತ ಶಿಕ್ಷಣ ನೀಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.


ಅಮೆರಿಕದ ಆರೋಗ್ಯ, ಶಿಕ್ಷಣ ಮತ್ತು ಉನ್ನತ ವೈದ್ಯಕೀಯ ಸೇವೆಗಳನ್ನು ನಮ್ಮ ರಾಜ್ಯದಲ್ಲಿ ಅಳವಡಿಸಲು ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು ವಿವರಿಸುವುದರ ಜೊತೆಗೆ ಈ ವಿಚಾರಗಳಿಗೆ ಸಂಬಂಧಿಸಿದಂತೆ ದುಂಡು ಮೇಜಿನ ಸಭೆಯಲ್ಲಿ ಗಾನಾ ಮತ್ತು ಅಮೆರಿಕದ ಸೆನೆಟರ್ (ಪ್ರತಿನಿಧಿ)ಗಳೊಂದಿಗೆ ಕೂಲಂಕಷವಾಗಿ ಚರ್ಚಿಸಿ ಅಲ್ಲಿನ ಮೂಲಭೂತ ಸೇವೆಗಳ ಬಗ್ಗೆ ಅರಿವು ಪಡೆದುಕೊಂಡಿದ್ದು, ನಮ್ಮ ಸರ್ಕಾರದ ಗಮನಕ್ಕೆ ತರಲಾಗುವುದು ಎಂದರು.

---

### ಕದಳಿಶ್ರೀ ಮಹಿಳಾ ವೇದಿಕೆಯಿಂದ ಅಮೃತ ಭೋಜನ ಜ್ಞಾನ ಸಿಂಚನ ಮಾಲಿಕೆ-6

# ಮಕ್ಕಳು ಜೀವನದಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳಲಿ

**■ವಿಜಯಸಾಕ್ಷಿ ಸುದ್ದಿ, ಗದಗ**



ಸಾಮರ್ಥ್ಯ ಎನ್ನುವುದು ಓರ್ವ ವ್ಯಕ್ತಿಯ ಒಂದು ಸನ್ನಿವೇಶದಲ್ಲಿ ಪರಿಣಾಮಕಾರಿಯಾಗಿ ವರ್ತಿಸಲು ಅನುವು ಮಾಡಿಕೊಡುವ ಸಂಬಂಧಿತ ಜಾಣ್ಮೆ, ಬದ್ಧತೆಗಳು ಜ್ಞಾನ ಹಾಗೂ ಕೌಶಲ್ಯಗಳ ಗುಚ್ಛವಾಗಿದ್ದು, ಮಕ್ಕಳು ಮೌಲ್ಯಯುತ ಸಾಮರ್ಥ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಶರಣೆ ಚಂಪಾ ಪಾಟೀಲ ಹೇಳಿದರು.

ಅವರು ಗದುಗಿನ ಆದರ್ಶ ನಗರದ ಸರ್ಕಾರಿ ಶಾಲೆ ನಂ. 9ರಲ್ಲಿ ಗದಗ ಜಿಲ್ಲಾ ಶರಣೆ ಅಕ್ಕಮಹಾದೇವಿ ಕದಳಿಶ್ರೀ ಮಹಿಳಾ ವೇದಿಕೆಯಿಂದ ಶ್ರಾವಣ ಮಾಸದ ಅಂಗವಾಗಿ ಜರುಗಿದ ಅಮೃತ ಭೋಜನ ಜ್ಞಾನ ಸಿಂಚನ ಮಾಲಿಕೆ-6ರ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ಭೋಜನ ವಿತರಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಸ್ಪಷ್ಟ ಓದು, ಶುದ್ಧ ಬರಹದಲ್ಲಿ ಮೊದಲು ಪರಿಣಿತಿ ಹೊಂದಬೇಕು. ಮನೆ ಹಾಗೂ ಶಾಲೆಯಲ್ಲಿ ಸಂತಸದಾಯಕ ಕ್ಷಣಗಳನ್ನು ಮಕ್ಕಳು ಅನುಭವಿಸಬೇಕು. ವಿದ್ಯಾರ್ಥಿ ಜೀವನವು ಬಂಗಾರದ ಜೀವನವಾಗಿದ್ದು, ಮೌಲ್ಯಗಳನ್ನು ಮನದಲ್ಲಿ ತುಂಬಿಕೊಂಡು ಮುನ್ನಡೆಯಬೇಕು ಎಂದರು.

ಮಕ್ಕಳಿಗೆ ಕಲಿಕಾ ಸಾಮಾಗ್ರಿಗಳನ್ನು ವಿತರಿಸಿದ ಚಿಂತಕಿ ಮಧು ಕರಿಬಿಷ್ಠಿ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾರ್ಥಿ ಜೀವನದಲ್ಲಿ ಉನ್ನತ ಅರಿವಿನ ಪ್ರಗತಿಯನ್ನು ಹೊಂದಬೇಕು. ಸಮಾನತೆ, ಗುಣಾತ್ಮಕ ಹಾಗೂ ನಮ್ರತೆಯಂತಹ ವಿಚಾರಗಳನ್ನು ಮನಸ್ಸಿನಲ್ಲಿ ಹೊಂದಿ ಓದುವ ಹಾಗೂ ಬರೆಯುವ, ಓದಿದ್ದನ್ನು ನೆನಪಿಟ್ಟುಕೊಳ್ಳುವುದನ್ನು ಅಭ್ಯಾಸ ಮಾಡಬೇಕು ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಜೈಂಟ್ಸ್ ಗ್ರುಪ್ ಆಫ್ ಸಖಿ-ಸಹೇಲಿ ಸಂಘಟನೆಯ ಗದಗ ಜಿಲ್ಲಾ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ಇದು ವೈಜ್ಞಾನಿಕ ಯುಗವಾಗಿದ್ದು, ಮಕ್ಕಳು ಕಲಿಕೆಯಲ್ಲಿ ಹೊಸ- ಹೊಸ ಅವಿಷ್ಕಾರಗಳನ್ನು ಅಳವಡಿಸಿಕೊಂಡು ವೈಜ್ಞಾನಿಕ ಮನೋಭಾವದೊಂದಿಗೆ ಮುನ್ನಡೆಯಬೇಕು. ಓದು ನಿರಂತರ ಕ್ರಿಯೆಯಾಗಿದ್ದು, ಮಕ್ಕಳು ವಿಶೇಷ ಆಸಕ್ತಿಯಿಂದ ಓದುವುದನ್ನು ರೂಢಿಸಿಕೊಳ್ಳಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕವಿತಾ ದಂಡಿನ, ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಂಘ-ಸಂಸ್ಥೆಗಳು ಕೈ ಜೋಡಿಸಿರುವುದು ಶ್ಲಾಘನೀಯವಾಗಿದ್ದು, ಮಕ್ಕಳ ಕಲಿಕೆಗೆ ಇದು ಸಹಕಾರಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ತಾರಾ ಪಾಟೀಲ ಮಾತನಾಡಿ, ಸರ್ಕಾರಿ ಶಾಲೆಗಳು ಮಕ್ಕಳಿಗೆ ನಮ್ಮತನದ ಅರಿವಿನ ಜೊತೆಗೆ ಜೀವನದ ಪಾಠ ಕಲಿಸುತ್ತದೆ. ಮಕ್ಕಳ ದಾಖಲಾತಿ ಹೆಚ್ಚಳಕ್ಕೆ ಇಂತಹ ಕಾರ್ಯಕ್ರಮಗಳು ಸಹಕಾರಿ. ಶ್ರಾವಣ ಮಾಸದ ವಿಶೇಷ ಭೋಜನದೊಂದಿಗೆ ಕದಳಿಶ್ರೀ ವೇದಿಕೆ ಪ್ರತಿ ವರ್ಷ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳುವುದು ಪ್ರೇರಣಾದಾಯಕ ಎಂದರು.

ಮಕ್ಕಳಿಂದ ವಚನ ಪಠಣ ನಡೆಯಿತು. ಕೆ.ಎಂ. ನರಗುಂದ ಸ್ವಾಗತಿಸಿ ವಂದಿಸಿದರು.

---

# ನಾಳೆ ಅಡವೀಂದ್ರ ಮಠದಲ್ಲಿ ಭಕ್ತರ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಮುಳಗುಂದ ನಾಕಾ ಬಳಿ ಇರುವ ಅಡವೀಂದ್ರ ಸ್ವಾಮಿ ಮಠದಿಂದ ದಸರಾ ಮಹೋತ್ಸವ ಆಚರಣೆಗೆ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಆ. 10 ರಂದು ರವಿವಾರ ಸಂಜೆ 5 ಗಂಟೆಗೆ ಮಠದಲ್ಲಿ ಭಕ್ತರ ಸಭೆ ಕರೆಯಲಾಗಿದೆ. ಶ್ರೀಮಠದ ಧರ್ಮದರ್ಶಿ ವೇ.ಮೂ. ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಪಂ.ಗುರುಸ್ವಾಮಿ ಕಲಕೇರಿ ಅವರ ಸಮ್ಮುಖದಲ್ಲಿ ನಡೆಯಲಿರುವ ಸಭೆಯಲ್ಲಿ, ಎಲ್.ಎಸ್.ನೀಲಗುಂದ, ಬಿ.ಎಂ.ಬಿಳೆಯಲಿ, ಪ್ರೊ.ಕೆ.ಎಚ್.ಬೇಲೂರ, ಜೆ.ಎಂ.ಯಾನಮಶೆಟ್ಟಿ ಉಪಸ್ಥಿತರಿರುವರು. ಭಕ್ತಾದಿಗಳು ಆಗಮಿಸಿ ಸಲಹೆ ಸೂಚನೆ ನೀಡಲು ಉಮಾಪತಿ ಭೂಸನೂರಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಸತ್ಸಂಗದಿಂದ ಮನಸ್ಸು ಬದಲಾಗುವದು

**■ವಿಜಯಸಾಕ್ಷಿ ಸುದ್ದಿ, ಗದಗ**



ಮನುಷ್ಯನ ಜೀವನವನ್ನೆ ಬದಲಾಯಿಸುವ ಶಕ್ತಿ ಸತ್ಸಂಗಕ್ಕಿದೆ ಎಂದು ಆಧ್ಯಾತ್ಮ ವಿದ್ಯಾಶ್ರಮದ ಶರಣೆ ನೀಲಮ್ಮತಾಯಿಯವರು ನುಡಿದರು.

ನಗರದ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಶ್ರಾವಣ ಚರಿತಾಮೃತ ಪ್ರವಚನದಲ್ಲಿ ಅವರು ಮಾತನಾಡುತ್ತಾ, ಲೌಕಿಕ ಚೌಕಟ್ಟಿನಲ್ಲಿ ಬಾಳುವವರು ಸತ್ಸಂಗದಲ್ಲಿ ಭಾಗವಹಿಸಬೇಕು. ಸತ್ಸಂಗದಲ್ಲಿ ಭಾಗವಹಿಸುವುದರಿಂದ ಮೋಹ ಇರುವುದಿಲ್ಲ. ಸತ್ಸಂಗದಿಂದ ಮನಸ್ಸು ಬದಲಾಗುವದು. ಮನುಷ್ಯ, ಮನುಷ್ಯನಾಗಿ ಸಾಯಬಾರದು. ಮನಷ್ಯ ಶರಣರಂತೆ ಸಾಯಬೇಕು. ಶ್ರಾವಣ ಮಾಸದಲ್ಲಿ ಒಳ್ಳೆಯದನ್ನು ಕೇಳಬೇಕು. ಒಳ್ಳೆಯದನ್ನು ಕೇಳಿದಂತೆ ನಡೆದುಕೊಳ್ಳಬೇಕು. ಸತ್ಸಂಗ ಮದ, ಮೋಹ, ಮತ್ಸರ ಬಿಡಿಸುತ್ತದೆ. ಸತ್ಸಂಗದ ಜ್ಞಾನ ಇದ್ದರೆ ಮನುಷ್ಯ ಸಮಾಜದಲ್ಲಿ ಒಳ್ಳೆಯವನಾಗಿ ಬದುಕುವನು. ಭಕ್ತಿ ಭಾವನೆ ಬಂದರೆ ಶರಣನಾಗುವ ಎಂದು ನುಡಿದರು.

ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ನಡೆಸಿದರು. ಹೇಮೇಂದ್ರಕುಮಾರ ಹಿರೇಮಠ ತಬಲಾ ಸಾಥ್ ನೀಡಿದರು. ಪ್ರಸಾದದ ಸೇವೆಯನ್ನು ಯಂಕಪ್ಪ ಹೆಬಸೂರ ಹಾಗೂ ಕುಟುಂಬದವರು ವಹಿಸಿದ್ದರು. ಹೆಬಸೂರ ಕುಟುಂಬದವರು ಶರಣೆ ನೀಲಮ್ಮತಾಯಿಯವರಿಗೆ ಕಾಣಿಕೆ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಟ್ರಸ್ಟ್ ಕಮಿಟಿ ಸದಸ್ಯರಾದ ಕೊಟ್ರಪ್ಪ ಕಮತರ, ಎಂ.ಎಂ. ಹಿರೇಮಠ ವಕೀಲರು, ಶಿವಣ್ಣ ಕತ್ತಿ, ಮುರಿಗೆಪ್ಪ ನಾಲವಾಡ, ಹಿರಿಯರಾದ ವಿರೂಪಾಕ್ಷಪ್ಪ ಅಕ್ಕಿ, ಬಸವರಾಜ ಜಂತ್ಲಿ, ಶಿವಣ್ಣ ಇಟ್ನಳ್ಳಿ, ಪುರಾಣ ಪ್ರವಚನ ಸಮಿತಿ ಅಧ್ಯಕ್ಷ ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಗಂಗಾಧರ ಮೇಲಗಿರಿ, ಗಂಗಾಧರ ನಂದಿಕೋಲಮಠ, ಶ್ರಿಶೈಲಪ್ಪ ಪಟ್ಟಣಶೆಟ್ಟಿ, ಸುರೇಶ ಮಾಳವಾಡ, ಪ್ರಭು ಶೆಟ್ಟರ, ಸುಭಾಸ ಹವಳೆ, ವಿರೂಪಾಕ್ಷಪ್ಪ ಅಂಗಡಿ, ಮಲ್ಲಿಕಾರ್ಜುನ ಹಿರೇಮಠ, ಶಂಕರ ನೀರಲಕೇರಿ, ಪಂಚಾಕ್ಷರ ಅಂಗಡಿ, ನವೀನ ನಾಲ್ವಾಡ, ಸುರೇಶ ಹೆಬಸೂರ, ಪ್ರಕಾಶ ಜಂತ್ಲಿ, ಸತ್ಸಂಗದ ಸದಸ್ಯರಾದ ಸುನಂದಾ ಜೋಬಾಳೆ, ಬೀನಾ ಮಾನ್ವಿ, ಉಮಾ ಪಟ್ಟಣಶೆಟ್ಟಿ, ಜಯಶ್ರೀ ನಿಲೂಗಲ್, ಕಸ್ತೂರಕ್ಕ ಮಾನ್ವಿ, ಶರಣಮ್ಮ ಶಿರೂರ, ಸುಶೀಲಾ ನಿಲೂಗಲ್ಲ, ನೀಲಕ್ಕ ಕಗನಳ್ಳಿ, ಅನಸಕ್ಕ ಮೇಲಗಿರಿ, ಕಲ್ಪನಾ ಹಿರೇಮಠ, ಸರಸ್ವತಿ ನಂದಿಕೋಲಮಠ, ಶೈಲಾ ಮಾನ್ವಿ ಮುತಾದವರು ಭಾಗವಹಿಸಿದ್ದರು.

---

### ಮೈಗೆ ಸಗಣಿ ಬಳಿದುಕೊಂಡು ಪುರಸಭೆಯೆದುರು ಪ್ರತಿಭಟಿಸಿದ ಪ್ರಕರಣ

# ಪೌರಕಾರ್ಮಿಕರಿಗೆ ವಿನಾಕಾರಣ ಅವಮಾನವಾಗಿದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಪುರಸಭೆಯ ಮುಂದೆ ತನ್ನ ಮಗನನ್ನು ಹೊರಗುತ್ತಿಗೆ ಪೌರಕಾರ್ಮಿಕನನ್ನಾಗಿ ಸೇರಿಸಿಕೊಳ್ಳಬೇಕೆಂದು ಸುರೇಶ ಬಸವನಾಯ್ಕರ ಎಂಬಾತ ತನ್ನ ಮೈಗೆ ಸಗಣಿ ಬಳಿದುಕೊಂಡು ಬುಧವಾರ ಪ್ರತಿಭಟನೆ ನಡೆಸಿರುವ ಕ್ರಮ ವಿರೋಧಿಸಿ, ಈತನ ವಿರುದ್ಧ ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ಗುರುವಾರ ಪೌರಕಾರ್ಮಿಕರ ಸಂಘದ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ ಅವರ ನೇತೃತ್ವದಲ್ಲಿ ಪೌರ ಕಾರ್ಮಿಕರು ಮುಖ್ಯಾಧಿಕಾರಿ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಬಸವಣ್ಣೆಪ್ಪ ನಂದೆಣ್ಣವರ, ಸುರೇಶ ಬಸವನಾಯ್ಕರ ಎನ್ನುವ ವ್ಯಕ್ತಿ ಪುರಸಭೆಯಲ್ಲಿ ಪೌರಕಾರ್ಮಿಕ, ಸಫಾಯಿ ಕರ್ಮಚಾರಿಯಾಗಿ ಅಥವಾ ಕೆಲಸ ನಿರ್ವಹಿಸಿಯೇ ಇಲ್ಲ. ಆದರೂ ದುರುದ್ದೇಶದಿಂದ, ಕುಡಿದ ಮತ್ತಿನಲ್ಲಿ ಅಸಾಂವಿಧಾನಿಕ, ಅಸಂಬದ್ಧ ರೀತಿಯಲ್ಲಿ ವರ್ತಿಸಿದ್ದಾನೆ. ಈ ವಿಷಯ ಪುರಸಭೆಗೆ ಮತ್ತು ಪೌರಕಾರ್ಮಿಕರಿಗೆ ವಿನಾಕಾರಣ ಅವಮಾನವಾಗುವಂತೆ ಮಾಡಿದೆ.

ಆತನು ತನ್ನ ಮಗನಿಗೆ ಪುರಸಭೆಯಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ ಕೆಲಸ ನೀಡುವಂತೆ ಪುರಸಭೆ ಆಡಳಿತ ಮಂಡಳಿ ಮತ್ತು ಮುಖ್ಯಾಧಿಕಾರಿಗಳಿಗಾಗಲಿ ಮನವಿಯನ್ನೂ ಮಾಡದೇ ಸುಳ್ಳು ಆರೋಪ ಮಾಡಿದ್ದಾನೆ. ಹೋರಾಟದ ಹಕ್ಕನ್ನು ದುರುಪಯೋಗ ಪಡಿಸಿಕೊಂಡಿದ್ದಲ್ಲದೇ ವೃಥಾ ಆರೋಪ ಮಾಡಿರುವ ಈತನ ವಿರುದ್ಧ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಶಿಸ್ತು ಕ್ರಮ ಜರುಗಿಸಬೇಕು ವಿನಂತಿಸಿದರು.

ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಈ ವ್ಯಕ್ತಿ ತನ್ನ ಬೇಡಿಕೆ, ಪ್ರತಿಭಟನೆಯ ಬಗ್ಗೆ ಕಿಂಚಿತ್ ಮಾಹಿತಿಯನ್ನೂ ನೀಡದೇ ಏಕಾಏಕಿ ವರ್ತಿಸಿದ್ದಾನೆ. ಈ ಕುರಿತಂತೆ ಜಿಲ್ಲಾಧಿಕಾರಿಗಳಿಗೆ ಮಾಹಿತಿ ಸಲ್ಲಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಹೇಳಿದರು.

ಪುರಸಭೆ ಉಪಾಧ್ಯಕ್ಷ ಪೀರದೋಷ ಆಡೂರ, ಸದಸ್ಯರಾದ ರಾಮಪ್ಪ ಗಡದವರ, ಪ್ರಕಾಶ ಕೊಂಚಿಗೇರಿಮಠ, ಫಕ್ಕೀರೇಶ ನಂದೆಣ್ಣವರ,ದೇವೇಂದ್ರಪ್ಪ ನಂದೆಣ್ಣವರ, ರಾಜು ನಂದೆಣ್ಣವರ, ಅನಿಲ ನಂದೆಣ್ಣವರ, ಮಂಜುನಾಥ ಬಸವನಾಯ್ಕರ್, ಮಂಜುನಾಥ ಹಾದಿಮನಿ, ರಮೇಶ ಕೊಣ್ಣೂರ, ಚನ್ನಪ್ಪ ಶಿರಹಟ್ಟಿ, ವಿಶ್ವನಾಥ ಹಾದಿಮನಿ, ಮಂಜುನಾಥ ಅಯ್ಯನವರ, ಅಶೋಕ ನಡುಗೇರಿ, ಪ್ರಕಾಶ ಹಿತ್ತಲಮನಿ ಸೇರಿದಂತೆ ಅನೇಕ ಪೌರಕಾರ್ಮಿಕರು ಹಾಜರಿದ್ದರು.

## ಜಾತ್ರಾ ಮಹೋತ್ಸವದ ನಿಮಿತ್ತ ಗಾಲಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರೀಕ್ಷೇತ್ರ ವರವಿ ಜಗದ್ಗುರು ಮೌನೇಶ್ವರರ ಜಾತ್ರಾ ಮಹೋತ್ಸವದ ನಿಮಿತ್ತ ಶ್ರೀ ಸಿದ್ಧರಾಮ ಮಹಾಸ್ವಾಮಿಗಳು ಹಾಗೂ ಶ್ರೀ ಸೋಮಲಿಂಗಯ್ಯ ಒಡೆಯರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ವಿಧಿ ವಿಧಾನಗಳೊಂದಿಗೆ ರಥದ ಗಾಲಿ ಪೂಜೆ ನೆರವೇರಿತು.

ಪೂಜಾ ಕಾರ್ಯಕ್ರಮದಲ್ಲಿ ಗದಗ ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುರುಂದ, ಟ್ರಸ್ಟಿಗಳಾದ ಕೊಟ್ರೇಶ ಆಚಾರ್ಯ, ನಿರಂಜನ ಬಡಿಗೇರ, ಚಂದ್ರಕಾಂತ ಸೋನಾರ, ನಾರಾಯಣಪ್ಪ ಸಿಂಗಟಾಲೂರ, ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ, ಬೆಟಗೇರಿ ಕಾಳಿಕಾ ದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ, ವರವಿ ಮೌನೇಶ್ವರ ಯುವಕ ಮಂಡಳದ ಅಧ್ಯಕ್ಷ ಚಿದಾನಚಿದ ಆಚಾರ್ಯ, ಸಮಾಜದ ಮುಖಂಡರಾದ ವಿಶ್ವನಾಥ ಯ. ಕಮ್ಮಾರ, ಮೌನೇಶ ಚಿ.ಬಡಿಗೇರ(ನರೇಗಲ್ಲ), ನಾಗರಾಜ ಕಮ್ಮಾರ, ಎಸ್.ಎನ್. ಬಡಿಗೇರ, ಮನೋಹರ ಕೆ., ಪೂರ್ವಾಚಾರ, ನರಸಪ್ಪ, ಗಣೇಶ ಕಮ್ಮಾರ, ಚಿದಾನಂದ ಶಿಲ್ಪಿ, ಅಶೋಕ ಬಡಿಗೇರ, ಶಂಕರಾಚಾರ್ಯ ಪತ್ತಾರ, ಶ್ರೀಧರ ಪತ್ತಾರ, ರಮೇಶ ಬಡಿಗೇರ ಸೇರಿದಂತೆ ಸಮಸ್ತ ವಿಶ್ವಕರ್ಮ ಸಮಾಜ ಬಾಂಧವರು, ವರವಿ ಗ್ರಾಮಸ್ಥರು ಮುಂತಾದವರಿದ್ದರು.

### ಶ್ರಾವಣ ಮಾಸದ ಪ್ರಯುಕ್ತ ಜಿಲ್ಲಾ ಕಾರಾಗೃಹದಲ್ಲಿ ಉಪನ್ಯಾಸ ಕಾರ್ಯಕ್ರಮ

## ಪ್ರಸಂಗಗಳು ಮನುಷ್ಯನನ್ನು ಕೆಟ್ಟವನನ್ನಾಗಿ ಮಾಡುತ್ತವೆ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ಹಕ್ಕಿಯಂತೆ ಹಾರಬಲ್ಲ, ಮೀನಿನಂತೆ ಈಜಬಲ್ಲನಾದರೂ ಮನುಷ್ಯ ಮನುಷ್ಯನಾಗಬೇಕು. ಅಂದಾಗ ಜೀವನದಲ್ಲಿ ಸಾರ್ಥಕತೆ ಮೂಡುತ್ತದೆ. ಹುಟ್ಟಿನಿಂದ ಯಾರೂ ಕೆಟ್ಟವರಲ್ಲ, ಕೆಲ ಪ್ರಸಂಗಗಳು ಮನುಷ್ಯನನ್ನು ಕೆಟ್ಟವನನ್ನಾಗಿ ಮಾಡುತ್ತವೆ. ಕಾಯಕ, ದಾಸೋಹ, ಪ್ರಸಾದಗಳಿಗೆ ವಚನಕಾರರು ನೀಡಿದ ಮಹತ್ವವನ್ನರಿತು ನಾವು ಮುನ್ನಡೆಯಬೇಕು. ಅಂದಾಗ ನಮ್ಮ ಬದುಕು ಪರಿಪೂರ್ಣತೆಯನ್ನು ಹೊಂದುತ್ತದೆ ಎಂದು ಪ್ರಾಚಾರ್ಯ ಡಾ. ರಾಜಶೇಖರ ದಾನರಡ್ಡಿ ಹೇಳಿದರು.

ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಗದಗ ಮತ್ತು ತಾಲೂಕ ಕದಳಿ ಮಹಿಳಾ ವೇದಿಕೆ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಜಿಲ್ಲಾ ಕಾರಾಗೃಹದಲ್ಲಿ ಹಮ್ಮಿಕೊಂಡ



ಉಪನ್ಯಾಸ ಕಾರ್ಯಕ್ರಮದಲ್ಲಿ 'ಮನಃ ಪರಿವರ್ತನೆಯಲ್ಲಿ ವಚನಗಳ ಪಾತ್ರ' ಎಂಬ ವಿಷಯವಾಗಿ ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕಾರಾಗೃಹದಲ್ಲಿ ಅಧೀಕ್ಷಕ ಈರಪ್ಪ ರಂಗಾಪುರ ಮಾತನಾಡಿ, ಮನುಷ್ಯ ಮಾಡಿದ ದಾನ-ಧರ್ಮದ ಕಾರ್ಯಗಳು ಯಾವಾಗಲೂ ಆತನನ್ನು ಕಾಪಾಡುತ್ತವೆ. ಹಾಗಾಗಿ ನಮ್ಮ ನಡೆ-ನುಡಿ ಶುದ್ಧವಾಗಿದ್ದರೆ ನಮಗೆ ಯಾವಾಗಲೂ ದೇವರು ಒಳ್ಳೆಯದನ್ನು ಮಾಡುತ್ತಾನೆ ಎನ್ನುವ ವಿಷಯವನ್ನು ವಚನಕಾರರು ಸಮಾಜಕ್ಕೆ ವಚನಗಳ ಮೂಲಕ ಮಾನವೀಯ ಮೌಲ್ಯಗಳನ್ನು ಬಿತ್ತಿದ್ದಾರೆ. ಅವರ ಹಾದಿಯಲ್ಲಿ ನಾವು ಮುನ್ನಡೆದು ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದರು.

ಸುಲೋಚನಾ ಎಮ್. ಐಹೊಳ್ಳಿ ಮಾತನಾಡಿ, ಮಕ್ಕಳು ಒಳ್ಳೆಯವರಾಗಿ ಬದುಕನ್ನು ಸಾಗಿಸಲು ತಂದೆ-ತಾಯಿಗಳ ಪಾತ್ರ ಕುಟುಂಬದಲ್ಲಿ ಬಹಳ ಮುಖ್ಯ. ಕಾರಾಗೃಹದಲ್ಲಿರುವವರು ತಮ್ಮ ಮನಸ್ಸನ್ನು ಪರಿವರ್ತನೆಗೊಳಿಸಿಕೊಂಡು ಸತ್ಯ, ಶುದ್ಧ ಕಾಯಕದ ಹಾದಿಯಲ್ಲಿ ಮುನ್ನಡೆಯಿರಿ ಎಂದರು.

ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಪ್ರೊ. ಎಸ್.ಯು. ಸಜ್ಜನಶೆಟ್ಟರ ಮಾತನಾಡಿ, ವಚನಕಾರರು ದುಷ್ಟ ಕಾರ್ಯ ಮಾಡಿದವರನ್ನು ಸಹ ತಿದ್ದಿದವರು, ಅದಕ್ಕಾಗಿ ಶರಣತ್ವವನ್ನು ಅಳವಡಿಸಿಕೊಂಡು ಸತ್ಕಾರ್ಯ,

ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಮಾತನಾಡಿ, ಯಾವ ಮನುಷ್ಯನೂ ಹುಟ್ಟಿನಿಂದ ಕೆಟ್ಟವನಾಗಿರುವುದಿಲ್ಲ. ಕೆಲ ಸಂದರ್ಭಗಳು ಮನುಷ್ಯ ತಪ್ಪು ಮಾಡುವಂತೆ ಪ್ರೇರೇಪಿಸಬಹುದು. ಹಾಗಾಗಿ ನಾವು ಮನಸ್ಸನ್ನು ಹಿಡಿತದಲ್ಲಿಟ್ಟುಕೊಂಡು ಕೆಲಸ ಕಾರ್ಯಗಳನ್ನು ಮಾಡಬೇಕು. ಒಂದು ವೇಳೆ ಗೊತ್ತಾಗದೇ ತಪ್ಪುಗಳನ್ನು ಎಸಗಿದರೂ ಸಹ ಮನಃ ಪರಿವರ್ತನೆಯ ಮೂಲಕ ಬದುಕನ್ನು ಅರ್ಥಪೂರ್ಣವಾಗಿ ಕಳೆಯಬೇಕು ಎನ್ನುವ ವಿಷಯವನ್ನು ವಚನಕಾರರು ತಿಳಿಸಿಕೊಟ್ಟಿದ್ದಾರೆ. ಅವರ ಹಾದಿಯಲ್ಲಿ ನಾವೆಲ್ಲಾ ನಡೆಯೋಣ ಎಂದು ಕಿವಿಮಾತು ಹೇಳಿದರು.

ಸತ್ಪಾತ್ರದ ಕೆಲಸ ನಿರ್ವಹಿಸಬೇಕು. ವಚನಗಳಲ್ಲಿನ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಹೇಳಿದರು.

ಶರಣ ಡಾ. ಎಂ.ವ್ಹಿ. ಐಹೊಳ್ಳಿಯವರು ಸಾಮೂಹಿಕ ವಚನ ಪ್ರಾರ್ಥನೆಯನ್ನು ಮಾಡಿಸಿದರು. ಕದಳಿ ಮಹಿಳಾ ವೇದಿಕೆಯ ಉಪಾಧ್ಯಕ್ಷೆ ರೇಣುಕಾ ಕರೇಗೌಡ್ರ ಸ್ವಾಗತಿಸಿದರು. ಪರಿಷತ್ತಿನ ಅಧ್ಯಕ್ಷರಾದ ಶರಣ ಪ್ರಕಾಶ ಟಿ.ಅಸುಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ದೀಪಾ ಸಿ. ಹನುಮಂತಗೌಡರ ಕಾರ್ಯಕ್ರಮ ನಿರೂಪಿಸಿದರು. ಶರಣೆ ರತ್ನಕ್ಕ ಪಾಟೀಲ ಶರಣು ಸಮರ್ಪಣೆಗೈದರು. ಕಾರಾಗೃಹದಲ್ಲಿರುವ ಸರ್ವರಿಗೂ ಸುಲೋಚನಾ ಎಮ್. ಐಹೊಳ್ಳಿಯವರು ಸಿಹಿಯನ್ನು ಹಂಚಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರಾಗೃಹದಲ್ಲಿ ಜೈಲರ್ ಸುನಂದಾ ಈರಬಾಯಿಗೋಳ, ಬಸವದಳ, ಗದಗ-ಬೆಟಗೇರಿ ಅಧ್ಯಕ್ಷರಾದ ವಿ.ಕೆ. ಕರೇಗೌಡ್ರ, ಮಲ್ಲಿಕಾರ್ಜುನ ನಿಂಗೋಜಿ, ಶಶಿಕಲಾ ಪಾಟೀಲ, ಸಿದ್ಧಣ್ಣ ಅಂಗಡಿ ಮತ್ತಿತರರು ಉಪಸ್ಥಿತರಿದ್ದರು.

## ಅಣ್ಣ-ತಂಗಿಯರ ಬಂಧ ಬೆಸಯುವ ರಾಖಿ ಹಬ್ಬ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತೀಯ ಪರಂಪರೆಯಲ್ಲಿ ಆಷಾಢ ಮುಗಿದು ಶ್ರಾವಣ ಪ್ರಾರಂಭವಾಯಿತೆಂದರೆ ಹಬ್ಬಗಳು ಸಾಲುಗಟ್ಟಿ ನಿಲ್ಲುತ್ತವೆ. ಯಾವಾಗ ದೀಪಾವಳಿ ಮುಗಿಯುತ್ತದೆಯೋ ಅಂದಿಗೆ ಹಬ್ಬಗಳ ಒಂದು ಕಂತು ಮುಗಿದಂತೆ. ಅಂತಹ ಹಬ್ಬಗಳಲ್ಲಿ ಅತ್ಯಂತ ಮಹತ್ವದ ಹಬ್ಬವೆಂದರೆ ರಾಖಿ ಹಬ್ಬ.

ಈ ಹಬ್ಬಕ್ಕೆ ಅಣ್ಣ-ತಂಗಿಯರ ಸಂಬಂಧವನ್ನು ಗಟ್ಟಿಗೊಳಿಸುವ ಹಿನ್ನೆಲೆ ಇದೆ. ಸಹೋದರರಿಗೆ ರಾಖಿ ಕಟ್ಟುವುದಕ್ಕಾಗಿಯೆ ಸಹೋದರಿಯರು ಊರಿಗೆ ಬರುತ್ತಾರೆ, ಇಲ್ಲವೆ ತಾವಿದ್ದಲ್ಲಿಗೇ ಸಹೋದರರನ್ನು ಕರೆಸಿಕೊಳ್ಳುತ್ತಾರೆ. ಸಹೋದರರು ರಾಖಿ ಕಟ್ಟಿದ ಸಹೋದರಿಯರಿಗೆ ಉತ್ತಮೋತ್ತಮ ಕಾಣಿಕೆಗಳನ್ನು ನೀಡಿ ಏನಾದರೂ ನಿನ್ನೊಂದಿಗೆ ನಾವಿದ್ದೇವೆ ಎಂಬ ಅಭಯವನ್ನು ನೀಡುತ್ತಾರೆ. ಈ ಹಿಂದಿನ ದಿನಗಳಲ್ಲಿ ರಕ್ಷಾಬಂಧನವೆಂದು ಸಹೋದರಿಯರು ಸಹೋದರರ ಕೈ ಮಣಿಕಟ್ಟಿಗೆ ದೇವರ ಮುಂದಿರಿಸಿದ, ಸಂಕಲ್ಪ ಮಾಡಿದ ದಾರವನ್ನು ಕಟ್ಟುತ್ತಿದ್ದರು. ಆದರೆ ಮುಂದೆ ಇದು ಒಂದು ದೊಡ್ಡ ಉದ್ಯಮವಾಗಿ ಎಲ್ಲ ಅಂಗಡಿಗಳಲ್ಲಿ ಬಣ್ಣಬಣ್ಣದ ವಿವಿಧ ಬಗೆಯ ರಾಖಿಗಳು ಬಂದವು. ರಕ್ಷಾ ಬಂಧನದ ಹಿನ್ನೆಲೆಯಲ್ಲಿ ಅಂಗಡಿಗಳಲ್ಲಿ ಒಂದು ರೂಪಾಯಿಯಿಂದ ಹಿಡಿದು ನೂರು, ಸಹಸ್ರಾರು ರೂಪಾಯಿಗಳವರೆಗೂ ರಾಖಿ ಇರುವುದನ್ನು ಕಾಣುತ್ತೇವೆ. ನರೇಗಲ್ಲದ ಬಹುತೇಕ ಅಂಗಡಿಗಳಲ್ಲಿ ರಾರಾಜಿಸುತ್ತಿರುವ ರಾಖಿಗಳು ಕಣ್ಮನ ಸೆಳೆಯುತ್ತಿವೆ.

ವರ್ಷದಿಂದ ವರ್ಷಕ್ಕೆ ರಾಖಿ ಬೇಡಿಕೆ ಹೆಚ್ಚಾಗುತ್ತಿದೆ. ನಾವೂ ಸಹ ಅನೇಕ ಬಗೆಯ ರಾಖಿಗಳನ್ನು ತರಿಸುತ್ತೇವೆ. ಆದರೂ ರಾಖಿ ಖರೀದಿಸುವ, ಬಗೆಬಗೆಯ ರಾಖಿ ಕೇಳುವ ಮಹಿಳೆಯರ ಸಂಖ್ಯೆ ಹೆಚ್ಚಾಗುತ್ತಿದೆ. ಕಳೆದ ಹತ್ತು-ಹನ್ನೆರಡು ದಿನಗಳಿಂದ ನಾವು ರಾಖಿ ಮಾರುತ್ತಿದ್ದೇವೆ ಎನ್ನುತ್ತಾರೆ ರಾಖಿ ಅಂಗಡಿಯ ನಿಂಗಪ್ಪ ಬೇವಿನಕಟ್ಟಿ.

### ಸ್ಲಂ ಜನರ ಮೇಲೆ ಭೂ ಮಾಫಿಯಾಗಳ ದೌರ್ಜನ್ಯ ಖಂಡಿಸಿ ಆ.11ರಂದು ಪ್ರತಿಭಟನೆ

## ಸ್ಲಂ ಜನರ ತೆರವಿಗೆ ಕುತಂತ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ರಿ.ಸ.ನಂ 594 ನವನಗರ ಸ್ಲಂ ಪ್ರದೇಶ ಹಾಗೂ ಗೋಸಾವಿ ಸ್ಲಂ ಪ್ರದೇಶಗಳನ್ನು ಸ್ಲಂ ಕಾಯ್ದೆ 1973ರ ಪ್ರಕಾರ ಅಧಿಕೃತವಾಗಿ ಘೋಷಣೆ ಮಾಡಲು ಸಂಘಟನೆಯಿಂದ ನಿರಂತರ ಹೋರಾಟವನ್ನು ನಡೆಸಲಾಗುತ್ತಿದೆ. ಆದರೆ ಭೂ ಮಾಲಿಕ ಹಾಗೂ ಭೂ ಮಾಫಿಯಾಗಳು ಅಧಿಕಾರಿಗಳ ಜೊತೆಗೆ ಶಾಮೀಲಾಗಿ ಇಲ್ಲಿಯ ಜನರ ಮನೆಗಳನ್ನು ತೆರವುಗೊಳಿಸಲು ಕುತಂತ್ರ ನಡೆಸುತ್ತಿರುವುದನ್ನು ಖಂಡಿಸಿ ಆಗಸ್ಟ್ 11ರಂದು ಸ್ಲಂ ಜನಾಂದೋಲನ-ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು




ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಹೇಳಿದರು.

ಅವರು ನಗರದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಈ ಪ್ರದೇಶದಲ್ಲಿ ಬಡ ಕೂಲಿ ಕಾರ್ಮಿಕರು 2001ರಿಂದ ನಿವೇಶನಗಳನ್ನು ಖರೀದಿಸಿ ಮನೆಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿದ್ದಾರೆ. ಇನ್ನು ಕೆಲ ಕುಟುಂಬಗಳು ಪ್ರಧಾನ ಮಂತ್ರಿ ಆವಾಸ್ ಯೋಜನೆಯಲ್ಲಿ ಸರ್ಕಾದ ಅನುದಾನದಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ. ಆದರೆ ಭೂ ಮಾಲಿಕನ ಹೆಸರಲ್ಲಿ ಭೂ ಮಾಫಿಯಾಗಳು ಸ್ಥಳೀಯ ಜನರ ಮೇಲೆ ದೌರ್ಜನ್ಯವನ್ನು ನಡೆಸಿ ಇವರ ಭೂಮಿಯನ್ನು ಕಿತ್ತುಕೊಳ್ಳುವ ಹುನ್ನಾರ ನಡೆಸುತ್ತಿರುವುದು ನಾವು ಖಂಡಿಸುತ್ತೇವೆ. ಅಂತೆಯೇ ಗೋಸಾವಿ ಪ್ರದೇಶವನ್ನು ಸ್ಲಂ ಪ್ರದೇಶವಾಗಿ ಘೋಷಣೆ ಮಾಡಲು ಈಗಾಗಲೇ ಸ್ಲಂ ಬೋರ್ಡ್ ಆಯುಕ್ತರಿಗೆ ದಾಖಲೆಗಳನ್ನು ನೀಡಲಾಗಿದೆ ಎಂದು ತಿಳಿಸಿದರು.

ಯಾವುದೇ ಕಾರಣಕ್ಕೂ ಸ್ಲಂ ಜನರು ವಾಸವಾಗಿರುವ ಪ್ರದೇಶಗಳನ್ನು ತೆರವುಗೊಳಿಸಲು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಮುಂದಾದರೆ ನಗರದ ಸಾವಿರಾರು ಸ್ಲಂ ನಿವಾಸಿಗಳೊಂದಿಗೆ ನಿರಂತರ ಹೋರಾಟವನ್ನು ನಡೆಸಿ ಸ್ಲಂ ಜನರ ವಿರೋಧಿಗಳಿಗೆ ತಕ್ಕ ಪಾಠ ಕಲಿಸಲಾಗುವುದು ಎಂದು ಇಮ್ತಿಯಾಜ್ ಮಾನ್ವಿ ಎಚ್ಚರಿಕೆ ನೀಡಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷರಾದ ಅಶೋಕ ಕುಡತಿನ್ನಿ, ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮೆಹಬೂಬಸಾಬ ಬಳ್ಳಾರಿ, ಮೌಲಾಸಾಬ ಗಚ್ಚಿ, ಇಬ್ರಾಹಿಂ ಮುಲ್ಲಾ, ಸಾಕ್ರುಬಾಯಿ ಗೋಸಾವಿ, ಅಶೋಕ ಗುಮಾಸ್ತೆ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಮಂಗಳಾ ಗೋಸಾವಿ, ರವಿಕುಮಾರ ಗೋಸಾವಿ, ಮಕ್ತುಮಸಾಬ ಮುಲ್ಲಾನವರ, ಬಸವರಾಜ ಕಳಸದ ಉಪಸ್ಥಿತರಿದ್ದರು.

## ಶೃದ್ಧಾ ಭಕ್ತಿಯ ವರಮಹಾಲಕ್ಷ್ಮೀ ವೃತಾಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರಾವಣ ಶುಕ್ರವಾರ ಸಂಪತ್ತಿನ ಒಡತಿ ವರಮಹಾಲಕ್ಷ್ಮೀ ವೃತಾಚರಣೆಯನ್ನು ಪಟ್ಟಣ ಸೇರಿ ತಾಲೂಕಿನ ಗ್ರಾಮೀಣ ಪ್ರದೇಶಗಳ ಮನೆಗಳಲ್ಲಿ ಮಹಿಳೆಯರು ಅತ್ಯಂತ ಸಡಗರ, ಸಂಭ್ರಮ, ಶೃದ್ಧಾ ಭಕ್ತಿಯಿಂದ ಆಚರಿಸಿದರು.

ಬೆಳಿಗ್ಗೆಯೇ ಮನೆಯ ಮುಂದೆ ರಂಗೋಲಿ ಬಿಡಿಸಿ, ತಳಿರು-ತೋರಣ ಕಟ್ಟಿ, ಅಲಂಕಾರದ ವಸ್ತುಗಳಿಂದ ಮನೆಯನ್ನು ಸಿಂಗರಿಸಿದ್ದರು. ದೇವರ ಜಗುಲಿ ಮತ್ತು ಮುಖ್ಯ ಸ್ಥಳದಲ್ಲಿ ವರಮಹಾಲಕ್ಷ್ಮೀ ಪೂಜೆಗೆ ಮಂಟಪ ಸಿದ್ಧಗೊಳಿಸಿ ಹಳದಿ ಹಿಟ್ಟಿನಿಂದ ಮೂಗು, ಕಣ್ಣು, ಕಿವಿ, ಮಾಡಿ ಅದಕ್ಕೆ ಆಭರಣಗಳನ್ನು ಹಾಕಿದ ತೆಂಗಿನ ಕಾಯಿಯಿಂದ



ಕಳಸ (ಲಕ್ಷ್ಮೀದೇವಿ) ಪ್ರತಿಷ್ಠಾಪಿಸಿ ವಿಶೇಷ ಪೂಜೆ, ಪ್ರಾರ್ಥನೆಯನ್ನು ನೆರವೇರಿಸಿದರು.

ಪೂಜೆಗೆ ಮುತ್ತೈದೆಯರನ್ನು ಆಹ್ವಾನಿಸಿ ಅವರಿಗೆ ಹಣ್ಣು-ಹೂವು, ಅರಿಷಿಣ-ಕುಂಕುಮ, ಹಸಿರು ರವಿಕೆ ಉಡಿ ತುಂಬಿದ ಬಳಿಕ ಮುತ್ತೈದೆಯರು ಪ್ರಸಾದ ಸ್ವೀಕರಿಸಿ ಕುಟುಂಬಕ್ಕೆ ಶುಭ ಹಾರೈಸಿದರು.

ಈ ಪೂಜೆ ಕೇವಲ ಐಶ್ವರ್ಯ ಪ್ರಾಪ್ತಿಗಷ್ಟೇ ಅಲ್ಲದೇ ಕುಟುಂಬ-ಸಮಾಜದ ಶ್ರೇಯೋಭಿವೃದ್ಧಿ, ಆರೋಗ್ಯ, ಸಂಪತ್ತು, ಜ್ಞಾನ, ಧೈರ್ಯ, ಲೋಕ ಕಲ್ಯಾಣ, ಶಾಂತಿ, ನೆಮ್ಮದಿ ಮತ್ತು ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಶೃದ್ಧಾ ಭಕ್ತಿಯಿಂದ ಮೊರೆಯಿಡುವುದೇ ಈ ಹಬ್ಬದ ಮಹತ್ವವಾಗಿದೆ ಎನ್ನುತ್ತಾರೆ ಕಳೆದ ಅನೇಕ ವರ್ಷಗಳಿಂದ ಈ ವೃತಾಚರಣೆ ಮಾಡುತ್ತಿರುವ ಸರಸ್ವತಿ ಹೊನ್ನೆಗೌಡ್ರ, ನಿರ್ಮಲಾದೇವಿ ಪವಾಡದ, ಹೇಮಾ ಬಾಳಿಕಾಯಿ, ಲೀಲಾ ಸಂಶಿ, ಶೃತಿ ಮೆಣಸಿಕಾಯಿ ಮುಂತಾದವರು.

## ಭಾರೀ ಮಳೆಗೆ ಸೇತುವೆ ಮುಳುಗಡೆ!

■ವಿಜಯಸಾಕ್ಷಿ ಸುದ್ದಿ, ನವಲಗುಂದ

ಧಾರಾಕಾರ ಮಳೆಗೆ ಸೇತುವೆ ಜಲಾವೃತಗೊಂಡು ವಾಹನ ಸವಾರರು ಪರದಾಟ ನಡೆಸಿರುವ ಘಟನೆ ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ನಾಯಕನೂರು ಗ್ರಾಮದಲ್ಲಿ ಜರುಗಿದೆ.

ನಾಯಕನೂರು ಬಳಿ ಸೇತುವೆ ಜಲಾವೃತಗೊಂಡ ಪರಿಣಾಮ ಗದಗ-ನಾಯಕನೂರು- ನರಗುಂದ ಸಂಪರ್ಕ ಸ್ಥಗಿತವಾಗಿದೆ. ಧಾರಾಕಾರವಾಗಿ ಸುರಿದ ಭಾರೀ ಮಳೆಗೆ ಹಳ್ಳ ಉಕ್ಕಿ ಹರಿಯುತ್ತಿವೆ. ಸೇತುವೆ ಮುಳುಗಡೆಗೊಂಡ ಪರಿಣಾಮ ವಾಹನ ಸವಾರರು ಪರದಾಟ ನಡೆಸಿದರು.

ರಸ್ತೆ ಸ್ಥಗಿತಗೊಂಡ ಪರಿಣಾಮ, ಶಲವಡಿ-ನವಲಗುಂದ ಮಾರ್ಗವಾಗಿ ಕೆಲವು ಪ್ರಯಾಣಿಕರು ನರಗುಂದಕ್ಕೆ ತೆರಳಿದರು.



## ನೂತನ ತಹಸೀಲ್ದಾರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ತಹಸೀಲ್ದಾರರಾಗಿ ಅಧಿಕಾರ ವಹಿಸಿಕೊಂಡ ಕೆ. ರಾಘವೇಂದ್ರ ರಾವ್ ಅವರನ್ನು ಕಾರ್ಯಾಲಯದಲ್ಲಿ ಜಗದ್ಗುರು ವರವಿ ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ವತಿಯಿಂದ ಗದಗ ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ ನೇತೃತ್ವದಲ್ಲಿ ಸ್ವಾಗತಿಸಿ ಸನ್ಮಾನಿಸಲಾಯಿತು. ಸವದತ್ತಿಯ ಶ್ರೀ ಸೋಮಲಿಂಗಯ್ಯ ಒಡೆಯರ ಮಹಾಸ್ವಾಮಿಗಳು, ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುರುಂದ, ಟ್ರಸ್ಟಿಗಳಾದ ಕೊಟ್ರೇಶ ಆಚಾರ್ಯ, ಚಂದ್ರಕಾಂತ ಸೋನಾರ, ನಾರಾಯಣಪ್ಪ ಸಿಂಗಟಾಲೂರ, ಪ್ರಮುಖರಾದ ರಾಜಗೋಪಾಲ ಡಿ.ಕಡ್ಲಿಕೊಪ್ಪ, ಶ್ರೀಧರ ಕೊಣ್ಣೂರ, ವಿಶ್ವನಾಥ ಯ.ಕಮ್ಮಾರ, ಮೌನೇಶ ಚಿ. ಬಡಿಗೇರ(ನರೇಗಲ್ಲ), ನಾಗರಾಜ ಕಮ್ಮಾರ, ಎಸ್.ಎನ್. ಬಡಿಗೇರ, ಗೋವಿಂದಪ್ಪ ಬಡಿಗೇರ, ನಾಗರಾಜ ಬಡಿಗೇರ, ಗಣೇಶ ಕಮ್ಮಾರ, ಅಶೋಕ ಬಡಿಗೇರ, ಶಂಕರಾಚಾರ್ಯ ಪತ್ತಾರ, ಶ್ರೀಧರ ಪತ್ತಾರ ಸೇರಿದಂತೆ ಸಮಾಜದ ಗಣ್ಯರು ಹಾಜರಿದ್ದರು.

## ನಿಧನ

### ಗಣೇಶ ವಿಷ್ಣುಸಾ ಹಬೀಬ



**ಗದಗ :** ನಗರದ ಮುಳಗುಂದ ರಸ್ತೆಯ ಅಂಭಾಭವಾನಿ ದೇವಸ್ಥಾನದ ಹತ್ತಿರದ, ಸಿದ್ದಲಿಂಗ ನಗರದ 2ನೇ ಕ್ರಾಸ್‌ನ ನಿವಾಸಿಯಾದ ಹಾಗೂ ವಿಷ್ಣು ಅಟೋಮೋಬೈಲ್ಸ್‌ನ ಮಾಲೀಕರಾದ ವಿಷ್ಣುಸಾ ಬಾಬಾಸಾ ಹಬೀಬ ಅವರ ಹಿರಿಯ ಪುತ್ರ ಗಣೇಶ ವಿಷ್ಣುಸಾ ಹಬೀಬ (29) ಅವರು ಆಗಸ್ಟ್ 08 ರಂದು ಶುಕ್ರವಾರ ನಸುಕಿನ ಜಾವದಲ್ಲಿ ನಿಧನರಾದರು.

ಮೃತರು ಪತ್ನಿ, ತಂದೆ-ತಾಯಿ, ಸಹೋದರ, ಸಹೋದರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯು ಶುಕ್ರವಾರ ಸಂಜೆ ಜರುಗಿತು.

### ನಿಂಗಪ್ಪ ತಲವಾಯಿ



**ರೋಣ:** ತಾಲೂಕಿನ ಯಾ.ಸ. ಹಡಗಲಿ ಗ್ರಾಮದ ನಿವಾಸಿ ನಿಂಗಪ್ಪ ಹನಮಂತಪ್ಪ ತಲವಾಯಿ (75) ಗುರುವಾರ ನಿಧನರಾದರು. ಮೃತರು ನಾಲ್ವರು ಪುತ್ರರು, ಪುತ್ರಿ ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ.

### ಬಸವ ಯೋಗ ಮಂದಿರದಲ್ಲಿ ಸಾಪ್ತಾಹಿಕ ವಚನ ಶ್ರಾವಣ-2025

## ವಚನಗಳನ್ನು ಅರ್ಥೈಸಿ ನಡೆದರೆ ಸಂಕಷ್ಟಗಳು ದೂರ

■ವಿಜಯಸಾಕ್ಷಿ ಸುದ್ದಿ, ಗದಗ

ಕಷ್ಟದಲ್ಲಿದ್ದವರಿಗೆ ಸಾಂತ್ವನ ಹೇಳುವಾಗ ಸಹಜವಾಗಿ ನಾವು 'ಕಷ್ಟಗಳು ಮನುಷ್ಯರಿಗೆ ಬರದೇ ಮರಕ್ಕೆ ಬರತಾವು ಏನು?' ಎಂದು ಹೇಳುತ್ತೇವೆ. ಹಾಗೆಯೇ ದೈಹಿಕ ತೊಂದರೆ ಪರಿಹಾರಕ್ಕೆ ಸಾಕಷ್ಟು ಆಸ್ಪತ್ರೆಗಳಿವೆ, ಡಾಕ್ಟರ್ ಇದ್ದಾರೆ, ಇನ್ನು ಮಾನಸಿಕ ಸಂಕಷ್ಟಗಳ ನಿವಾರಣೆಗೆ ಮಹಾತ್ಮರ ಆಶೀರ್ವಾದ, ಸತ್ಸಂಗ, ಶರಣರ ವಚನ, ಪ್ರವಚನ ಮುಂತಾದವುಗಳಿವೆ ಎಂದು ಹೇಳುತ್ತೇವೆ. ನಮಗೆ ಸಂಕಷ್ಟಗಳು ಬರಬಾರದೆಂದರೆ ಶರಣರ ವಚನಗಳನ್ನು ಸರಿಯಾಗಿ ಅರ್ಥೈಸಿಕೊಂಡು ಅದರಂತೆ ನಡೆದರೆ ನಮ್ಮ ಎಷ್ಟೋ ಕಷ್ಟಗಳು ದೂರವಾಗುವವು ಎಂದು ನರೆಗಲ್ಲ ಸರಕಾರಿ ಪಿ.ಯು ಕಾಲೇಜಿನ



ನಿವೃತ್ತ ಪ್ರಾಚಾರ್ಯ ಎನ್.ಎಂ. ಪವಾಡಿಗೌಡ್ರ ತಿಳಿಸಿದರು.

ಎಸ್.ವಾಂಯ್.ಬಿ.ಎಂ. ಎಸ್ ಯೋಗಪಾಠಶಾಲೆಯ ಬಸವ ಯೋಗ ಚಿಂತನ ಕೂಟ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಜರುಗಿದ 2ನೇ ಶ್ರಾವಣ ಸೋಮವಾರದ ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಿಎಸ್‌ಎನ್‌ಎಲ್ ನಿವೃತ್ತ ಅಧಿಕಾರಿ ಚಂದ್ರಶೇಖರ ಪಟ್ಟಣಶೆಟ್ಟಿ, ಶ್ರಾವಣ ಮಾಸ ಪವಿತ್ರ ಮಾಸವಾಗಿದೆ. ಶ್ರಾವಣದಲ್ಲಿ ದಾನ, ಧರ್ಮ, ಜಂಗಮ ಸೇವೆ ಮಾಡಿದರೆ ಪುಣ್ಯ ಬರುತ್ತದೆ ಎಂಬ ನಂಬಿಕೆ ನಮ್ಮಲ್ಲಿದೆ. ಅಂಧಶ್ರದ್ಧೆಯ ವೃತಾಚರಣೆಗಳನ್ನು ಬಿಟ್ಟು ಕಾಯಕ, ದಾಸೋಹ ತತ್ವಗಳನ್ನು ಪರಿಪಾಲಿಸಿ ಪುಣ್ಯವಂತರಾಗಬೇಕೆಂದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಕಾರ್ಯಕ್ರಮ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ದಾಸೋಹ ಸೇವೆ ಸಲ್ಲಿಸಿದ ಅನ್ನಪೂರ್ಣಾ ವರವಿ, ಸುಲೋಚನಾ ಐಹೊಳ್ಳಿ, ಶಕುಂತಲಾ ಬ್ಯಾಳಿ ಇವರುಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಪ್ತಾಹಿಕ ವಚನ ಶ್ರಾವಣ ಸೇವಾ ಸಮಿತಿ ಅಧ್ಯಕ್ಷ ಡಾ. ಎಸ್.ಕೆ. ನಾಲತ್ವಾಡಮಠ ಮಾತನಾಡಿ, ದಿನಬೆಳಗಾದರೆ ನಾವು ಟಿ.ವಿ, ಮೊಬೈಲ್, ಪತ್ರಿಕೆ, ಮಾಧ್ಯಗಳ ಮೂಲಕ ವಂದನೆ, ನಿಂದನೆ, ದೋಷಾರೋಪಣೆ, ಸಂಶಯ, ದ್ವಂದ ವಿಚಾರಗಳನ್ನು ಕೇಳುತ್ತೇವೆ. ಮನಃಪರಿವರ್ತನೆಯಾಗುವ ವಿಷಯಗಳು ಬಹು ವಿರಳವಾಗಿವೆ. ಪರಿವರ್ತನೆಗೆ ವಚನಗಳು ಕೈಗನ್ನಡಿಯಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿ.ಪಿ. ಸವಡಿ, ಎಸ್.ಎನ್. ಹಕಾರಿ, ಡಾ. ಎ.ಡಿ. ಹುಳಪಲ್ಲೆ, ಜಿ.ಪಿ. ಕಟ್ಟಿಮನಿ, ಅರುಣಾ ಇಂಗಳಳ್ಳಿ, ಶೋಭಾ ಭಾಂಡಗೆ, ಜಯಶ್ರೀ ದಾವಣಗೇರಿ, ಜಯಶ್ರೀ ವಸ್ತ್ರದ, ಗೌರಿ ಜಿರಂಕಳಿ, ನೀಲಾವತಿ ರಾಯಾಪೂರ, ಸುಮಿತ್ರ ಭಾಸಲಾಪೂರ ಮುಂತಾದವರಿದ್ದರು.

ವಿಜಯಲಕ್ಷ್ಮೀ ಮೇಕಳಿ ಸಾಮೂಹಿಕ ಬಸವ ಪ್ರಾರ್ಥನೆ ತಿಳಿಸಿದರು. ಅನ್ನಪೂರ್ಣ ವರವಿ ಧರ್ಮ ಗ್ರಂಥ ಪಠಣ ಮಾಡಿದರು. ವಿಜಯಲಕ್ಷ್ಮೀ ಆನೆಹೊಸೂರ ಸ್ವಾಗತಿಸಿದರು. ಶಿವನಗೌಡ ಗೌಡರ ವಂದಿಸಿದರು. ಸಾಪ್ತಾಹಿಕ ವಚನ ಶ್ರಾವಣ ಸೇವಾ ಸಮಿತಿ ಕೋಶಾಧ್ಯಕ್ಷರಾದ ಡಾ. ಎಂ.ವ್ಹಿ. ಐಹೊಳ್ಳಿ ಕಾರ್ಯಕ್ರಮ ನಿರೂಪಿಸಿದರು.

### 'ಮಕ್ಕಳ ರಕ್ಷಣೆ, ವಿಪತ್ತು ನಿರ್ವಹಣೆಯಲ್ಲಿ ಭಾಗಿದಾರ ಇಲಾಖೆಗಳ ಪಾತ್ರ' ಕುರಿತು ತರಬೇತಿ

# ಭಾಗಿದಾರ ಇಲಾಖೆಗಳ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಗದಗ

ಬಾಲ ಹಾಗೂ ಕಿಶೋರ ಕಾರ್ಮಿಕರ, ಭಿಕ್ಷಾಟನೆಯಲ್ಲಿ ತೊಡಗಿದ ಮಕ್ಕಳ, ಬೀದಿಬದಿ ಮಕ್ಕಳ, ಅನಾಥ, ನಿರ್ಗತಿಕ ಮಕ್ಕಳ, ವಿಪತ್ತಿಗೆ ಬಲಿಯಾದ ಮಕ್ಕಳ ರಕ್ಷಣೆ ಮಾಡುವಂತೆ ಹಾಗೂ ಈ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಕರೆ ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಆರೋಗ್ಯ ಮತ್ತುಕುಟುಂಬ ಕಲ್ಯಾಣ ಇಲಾಖೆ, ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಘಟಕ, ಗದಗಇವರ ಸಹಯೋಗದಲ್ಲಿ 'ಮಕ್ಕಳ ರಕ್ಷಣೆ, ವಿಪತ್ತು ನಿರ್ವಹಣೆಯಲ್ಲಿ ಭಾಗಿದಾರ ಇಲಾಖೆಗಳ ಪಾತ್ರ' ಕುರಿತು 2 ದಿನಗಳ ತರಬೇತಿದಾರರ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉಪ ಅಧೀಕ್ಷಕರು ಮಾತನಾಡಿ, ಪೊಲೀಸ್ ಇಲಾಖೆ 24/7 ವಿಪತ್ತು ಸಂದರ್ಭದಲ್ಲಿ ಹಾಗೂ ಮಕ್ಕಳ ರಕ್ಷಣಾ ಕಾರ್ಯಾಚರಣೆಯಲ್ಲಿ ಸದಾ ಸನ್ನದ್ಧವಾಗಿದ್ದು, ಎಂತಹುದೇ ತುರ್ತು ಪರಿಸ್ಥಿತಿಯಲ್ಲಿ ರಕ್ಷಣೆಗೆ 112ಗೆ ಕರೆ ಮಾಡಬುದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್ ಬುರಡಿ, ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಶೌಚಾಲಯ ನಿರ್ವಹಣೆ ಮತ್ತು ದುರಸ್ತಿ ಕಾಮಗಾರಿಯನ್ನು ಹಂತ ಹಂತವಾಗಿ ಮಾಡಲಾಗುತ್ತಿದೆ. ಬಾಲ್ಯ ವಿವಾಹ, ಬಾಲಕಾರ್ಮಿಕತೆ, ಪೋಕ್ಸೋದಂತಹ ಪ್ರಕರಣಗಳಿಗೆ ಬಲಿಯಾಗುವವರ ಬಹುಸಂಖ್ಯಾತ ಮಕ್ಕಳು ಶಾಲೆಯಿಂದ ಹೊರಗುಳಿದ ಮಕ್ಕಳೇ ಆಗಿರುತ್ತಾರೆ. ಆದ್ದರಿಂದ ಅಂತಹ ಶಾಲೆಯಿಂದ ಹೊರಗುಳಿದ ಮಕ್ಕಳನ್ನು 'ಮರಳಿ ಬಾ ಶಾಲೆಗೆ' ಎಂಬ ಕಾರ್ಯಕ್ರಮದ ಮೂಲಕ ಎಲ್ಲ ಮಕ್ಕಳನ್ನು ಶಾಲೆಗೆ ಸೇರಿಸಿಕೊಳ್ಳುವ ಕಾರ್ಯಕ್ರಮ ಮಾಡಲಾಗುತ್ತಿದೆ ಎಂದು ತಿಳಿಸಿದರು. ವಿಪತ್ತು ನಿರ್ವಹಣಾ ತಜ್ಞ ಶಿವಾನಂದ ರಾಜನಾಳ ಮಾತನಾಡಿ, ಕಂದಾಯ ಇಲಾಖೆಯು ವಿಪತ್ತು ಪೂರ್ವ, ವಿಪತ್ತು ಸಂದರ್ಭದಲ್ಲಿ ಹಾಗೂ ವಿಪತ್ತು ಘಟಿಸಿದ ನಂತರ ಕೈಗೊಳ್ಳಬೇಕಾದ ಕ್ರಮಗಳು, ಮಕ್ಕಳ, ಮಹಿಳೆಯರ ಮತ್ತು ವಿಕಲಚೇತನರ ರಕ್ಷಣೆ ಕಾರ್ಯಾಚರಣೆ ಕುರಿತು ಸಮಗ್ರವಾಗಿ ಉಪನ್ಯಾಸ ನೀಡಿದರು. ಎರಡನೇ ದಿನ ಅಗ್ನಿಶಾಮಕ ಅಧಿಕಾರಿ ವ್ಹಿ.ಎಸ್. ಟೆಕ್ಕೇಕರ್, ಅಗ್ನಿ ದುರಂತ ಪೂರ್ವ ವಹಿಸಬೇಕಾದ ಮುಂಜಾಗ್ರತೆ, ದುರಂತ ಸಂಭವಿಸಿದ ಸಂದರ್ಭದಲ್ಲಿ ರಕ್ಷಣಾ ಕಾರ್ಯಾಚರಣೆಯ ಪ್ರಾತ್ಯಕ್ಷಿಕೆ ಮೂಲಕ ತಿಳಿಸಿ ಉಪನ್ಯಾಸ ನೀಡಿದರು.




> ಮೊದಲನೇ ದಿನ ಕೊಪ್ಪಳದ ಯುನಿಸೆಫ್ ಸಂಯೋಜಕ ಹರೀಶ ಜೋಗಿ ಮಕ್ಕಳ ಹಕ್ಕುಗಳು, ಬಾಲನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ, ಬಾಲ ಕಾರ್ಮಿಕತೆ ಮತ್ತು ಕಿಶೋರ ಕಾರ್ಮಿಕ ನಿಷೇಧ ಹಾಗೂ ನಿಯಂತ್ರಣ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆಗಳ ಕುರಿತು ಉಪನ್ಯಾಸ ನೀಡಿದರು.

ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಮ್.ಎಮ್. ಅವಟೆ ತರಬೇತಿಯಲ್ಲಿ ಭಾಗವಹಿಸಿದ ಅಧಿಕಾರಿ/ಸಿಬ್ಬಂದಿಗಳಿಗೆ ಪ್ರಶಸ್ತಿಪತ್ರ ವಿತರಿಸಿ, 2 ದಿನಗಳ ತರಬೇತಿಯಲ್ಲಿ ಪಡೆದ ಜ್ಞಾನವನ್ನು ತಳಮಟ್ಟದವರೆಗೆ ಎಲ್ಲಾ ಸಿಬ್ಬಂದಿಗಳಿಗೆ ಹಾಗೂ ಸಾರ್ವಜನಿಕರಿಗೆ ತಲುಪಿಸಿ ಮಕ್ಕಳ ರಕ್ಷಣೆ ಹಾಗೂ ವಿಪತ್ತು ನಿರ್ವಹಣೆ ಕುರಿತು ಜಾಗೃತಿ ಮೂಡಿಸುವಂತೆ ಕರೆ ನೀಡಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ರಫೀಕಾ ಹಳ್ಳೂರು ಗಣ್ಯರನ್ನು ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಲ್ಲಪ್ಪ ಹೊಸಳ್ಳಿ ನಿರೂಪಿಸಿ ವಂದಿಸಿದರು.

# ಶ್ರೀ ಭಗವದ್ಗೀತಾ ಜ್ಞಾನೇಶ್ವರ ಗ್ರಂಥ ಪಾರಾಯಣ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದ ಶ್ರೀ ಪಾಂಡುರಂಗ ರುಕುಮಾಯಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ನಿಮಿತ್ತ ಶ್ರೀ ಭಗವದ್ಗೀತಾ ಜ್ಞಾನೇಶ್ವರ ಗ್ರಂಥದ ಪಾರಾಯಣ ನಿತ್ಯ ಯಶಸ್ವಿಯಾಗಿ ನಡೆಯುತ್ತಿದ್ದು, ಸಮಾಜ ಬಾಂಧವರು ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರದ್ಧಾಭಕ್ತಿಯಿಂದ ಪಾರಾಯಣ ಮಾಡುತ್ತಿದ್ದಾರೆ. ಪಂಡರಪೂರದ ಶ್ರೀ ತಾತ್ಯಾಸಾಹೇಬ ವಾಸ್ಕರ ಮಹಾರಾಜರ ಕೃಪಾಶೀರ್ವಾದದಿಂದ ಕಳೆದ 25 ವರ್ಷಗಳಿಂದ ಪಾರಾಯಣ ನಡೆಯುತ್ತಿದ್ದು, ಶ್ರಾವಣ ಮಾಸದ ಆರಂಭದಿಂದ ನಿತ್ಯ ಬೆಳಿಗ್ಗೆ 5.30ರಿಂದ ಕಾಕಡಾರತಿ, ಭಜನೆ ಹಾಗೂ ಸಂತ ಶ್ರೇಷ್ಠ ಶ್ರೀ ಜ್ಞಾನೇಶ್ವರ ಮಹಾರಾಜರ ವಿರಚಿತ ಶ್ರೀಭಗವದ್ಗೀತಾ ಜ್ಞಾನೇಶ್ವರೀ ಗ್ರಂಥ ಪಾರಾಯಣ, ನಾಮಜಪ, ಮಂಗಳಾರತಿ, ಅಚ್ಚುಕಟ್ಟಾಗಿ ನಡೆಯುತ್ತಿದೆ. ಕೊಪ್ಪಳದ ಹ.ಭ.ಪ ಶ್ರೀ ಪರಶುರಾಮ ಮಹೇಂದ್ರಕರ ಮಾರ್ಗದರ್ಶದಲ್ಲಿ ಆರಂಭವಾದ ಪಾರಾಯಣ ಹಾಗೂ ಹಭಪ ನಾರಾಯಣ ಬಿಸೆ ಮಾರ್ಗದರ್ಶನದಿಂದ ಕಾಕಡಾರತಿ ಪ್ರತಿ ವರ್ಷ ಅಖಂಡವಾಗಿ ನಡೆಯುತ್ತಾ ಬಂದಿದೆ. ವೀಣೆಕರಿ ಹಿರಿಯರಾದ ಹಭಪ.ಪುಂಡಲೀಕ ಮಾತಾಡೆ, ಸತೀಶ ಮಾಂಡ್ರೆ ವ್ಯಾಸಪೀಠ ನೇತೃತ್ವದಲ್ಲಿ ವೆಂಕಟೇಶ್ ಮಾತಾಡೆ, ಪ್ರವೀಣ ಮಾತಾಡೆ, ಜ್ಞಾನೋಬಾ ಬೋಮಲೆ, ನಿವೃತ್ತಿ ತಾಂದಳೆ, ಅರುಣ ನವಲೆ, ಸಂತೋಷ ಸರ್ವದೆ, ನಾಗರಾಜ ತಿರುಮಲೆ, ಉಮಾಕಾಂತ, ರವಿ ಬೋಮಲೆ, ಸಂಜೀವ, ಹನಮಂತಸಾ, ರಮೇಶ ಭಾವಿಕಟ್ಟಿ, ಪರಶುರಾಮ, ಮಹಾಬಳೇಶ, ರುಕ್ಮಿಣಿ ರಂಪುರೆ, ಲತಾಬಾಯಿ, ಅಚಲಕರ, ಮಹೇಂದ್ರಕರ್, ಲಕ್ಷ್ಮೀಬಾಯಿ, ಅರ್ಚಕ ಪುಂಡಲೀಕ ಸೇರಿದಂತೆ ಮಹಿಳೆಯರು ಯುವಕರು, ಮಕ್ಕಳು ವಾಚನದಲ್ಲಿ ಪಾಲ್ಗೊಳ್ಳುತ್ತಿದ್ದಾರೆ.

ಸಮಾಜದ ಮುಖಂಡ ಕಿರಣ ನವಲೆ ಪ್ರತಿಕ್ರಿಯಿಸಿ, ಕಳೆದ 25 ವರ್ಷಗಳಿಂದ ಜ್ಞಾನೇಶ್ವರಿ ಗ್ರಂಥ ಪಾರಾಯಣ ಪಾಂಡುರಂಗ ದೇವಸ್ಥಾನದಲ್ಲಿ ನಿರಂತರವಾಗಿ ನಡೆದಿದ್ದು, ಸಮಾಜದ ಬಾಂಧವರ ಜೊತೆ ಇತರೆ ಸಮಾಜ ಬಾಂಧವರು ಇದರಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಮಕ್ಕಳಲ್ಲಿ ನಮ್ಮ ಸಂಪ್ರದಾಯ ಸಂಸ್ಕೃತಿಗಳನ್ನು ಬೆಳೆಸುವ ಉದ್ದೇಶದಿಂದ ಮಕ್ಕಳನ್ನೂ ಇದರಲ್ಲಿ ಪಾಲ್ಗೊಳ್ಳುವಂತೆ ಮಾಡಿದ್ದೇವೆ ಎಂದರು.

# ಯೂರಿಯಾ ಗೊಬ್ಬರಕ್ಕೆ ಕೈ ಕೈ ಮಿಲಾಯಿಸಿದ ಅನ್ನದಾತರು!

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಯೂರಿಯಾ ಗೊಬ್ಬರಕ್ಕಾಗಿ ರೈತರು ನಡೆಸುತ್ತಿರುವ ಪರದಾಟ ಹೇಳತ್ತೀರದ್ದಾಗಿದೆ.

ಅದರಲ್ಲೂ ಗದಗ ಜಿಲ್ಲೆಯಲ್ಲಿ ಯೂರಿಯಾ ಕೊರತೆ ಹೆಚ್ಚಾಗಿದ್ದು, ರೈತರು ಹಗಲು– ರಾತ್ರಿ ಎನ್ನದೇ ಕ್ಯೂ ನಿಂತು ಗೊಬ್ಬರಕ್ಕಾಗಿ ಪರಿತಪಿಸುತ್ತಿದ್ದಾರೆ. ಇನ್ನೊಂದೆಡೆ ಗದಗದಲ್ಲಿ ಯೂರಿಯಾ ಗೊಬ್ಬರಕ್ಕಾಗಿ ರೈತರು ಗಲಾಟೆ ಮಾಡಿಕೊಂಡಿದ್ದಾರೆ.

ಜಿಲ್ಲೆಯಲ್ಲಿ ಯೂರಿಯಾ ಗೊಬ್ಬರ ಅಭಾವ ಉಂಟಾಗಿದೆ. ಯೂರಿಯಾ ಗೊಬ್ಬರಕ್ಕಾಗಿ ರೈತರು ನೂಕಾಟ, ತಳ್ಳಾಟ, ವಾಗ್ವಾದ ನಡೆಸಿರೋ ಪ್ರಸಂಗ ಕೂಡ ನಡೆದಿದೆ. ಮುಂಡರಗಿ ತಾಲೂಕಿನ ಕದಾಂಪೂರ ಗ್ರಾಮದಲ್ಲಿ ಯೂರಿಯಾ ಗೊಬ್ಬರಕ್ಕೆ ರೈತರು ಕೈ ಕೈ ಮಿಲಾಯಿಸಿದ್ದಾರೆ. ಕದಾಂಪೂರ ಗ್ರಾಮದ ರೈತ ಮಿತ್ರ ಕೃಷಿ ಸೇವಾ ಕೇಂದ್ರದ ಎದುರು ಗಲಾಟೆ ನಡೆದಿದೆ. ಯೂರಿಯಾ ಗೊಬ್ಬರಕ್ಕಾಗಿ ಕಿಲೋಮೀಟರ್ ಉದ್ದಕ್ಕೆ ಸರತಿ ಸಾಲು ಇತ್ತು. ಈ ವೇಳೆ ಗೊಬ್ಬರ ಖರೀದಿಗೆ ರೈತರು ಮುಗಿಬಿದ್ದಿದ್ದಾರೆ. ಆಗ ರೈತರ ನಡುವೆ ನೂಕಾಟ, ತಳ್ಳಾಟ, ವಾಗ್ವಾದ ನಡೆದಿದೆ. ಮಾತಿಗೆ ಮಾತು ಬೆಳೆದು ರೈತರು ಕೈ ಕೈ ಮಿಲಾಯಿಸಿದ್ದಾರೆ.




ಬಳಿಕ ಸ್ಥಳದಲ್ಲೇ ಇದ್ದ ಪೊಲೀಸರು ಮಧ್ಯ ಪ್ರವೇಶ ಮಾಡಿ, ಪರಿಸ್ಥಿತಿ ತಿಳಿಗೊಳಿಸಿದರು. ಬಳಿಕ ಪೊಲೀಸ್ ಕಾವಲಿನಲ್ಲಿ ಗೊಬ್ಬರ ವಿತರಣೆ ಮಾಡಲಾಗಿದೆ. ಒಟ್ಟಾರೆ ರಾಜ್ಯಾದ್ಯಂತ ಯೂರಿಯಾ ಗೊಬ್ಬರಕ್ಕಾಗಿ ರೈತರ ಪರದಾಟ ಮುಂದುವರೆದಿದೆ. ಕೃಷಿ ಅಧಿಕಾರಿಗಳ ವಿರುದ್ಧ ಅನ್ನದಾತರು ತಮ್ಮ ಆಕ್ರೋಶ ಹೊರ ಹಾಕುತ್ತಿದ್ದಾರೆ.

# ಎಸ್‌ಡಿಎಮ್‌ಸಿಗೆ ನೂತನ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಸ 02 ರ ನೂತನ ಎಸ್ ಡಿ ಎಂ ಸಿ ಅಧ್ಯಕ್ಷರಾಗಿ ರಮೇಶ ಹಾರೋಗೇರಿ, ಉಪಾಧ್ಯಕ್ಷರಾಗಿ ಲೀಲಾವತಿ ಅಕ್ಕಿ, ಸದಸ್ಯರಾಗಿ ದಾವಲಪ್ಪ ಚಾಕಲಬ್ಬಿ, ಫಕ್ಕೀರಪ್ಪ ಕರಡಿ, ಮಹಾಂತೇಶ ಜಾಲಣ್ಣವರ, ರೇಷ್ಮಾ ಶೇಖ, ಮೈಮುನ್ನಿಸಾ ನರಗುಂದ, ಅಲಿಮಾ ತಹಶೀಲ್ದಾರ, ಇಸ್ಮಾಯಿಲ್ ಸುಂಕದ, ಇಮಾಮಸಾಬ ಒಂಟಕುದುರಿ, ಅನ್ನಪೂರ್ಣ ಜುಮ್ಮಣ್ಣನವರ, ರೇಖಾ ಸುಲಾಖೆ, ಬಸವರಾಜ್ ಮೆಣಸಿನಕಾಯಿ, ಈರಪ್ಪ ಸನ್ನಿ, ಚಂದ್ರು ಜುಮ್ಮಣ್ಣವರ, ಶೃತಿ ಕೆಳಗೇರಿ, ಶಶಿಕಲಾ ಮಠದವರ, ದ್ಯಾಮವ್ವ ದೊಡ್ಡಮನಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ಶಾಲಾ ಪ್ರಧಾನ ಗುರು ಎಸ್. ಪಿ. ಶ್ಯಾಗೋಟಿ, ಪಟ್ಟಣ ಪಂಚಾಯತಿ ಸದಸ್ಯರಾದ ಎಸ್.ಸಿ.ಬಡ್ನಿ, ಕೆ.ಎಲ್. ಕರಿಗೌಡರ, ಮಹಾದೇವಪ್ಪ ಗಡಾದ, ಮಹಾಂತೇಶ ನೀಲಗುಂದ, ಬಸವರಾಜ ಹಾರೋಗೇರಿ, ಗೂಳಪ್ಪ ಮಜ್ಜಿಗುಡ್ಡ ಹಾಗೂ ಕುಬೇರಪ್ಪ ಗಡಾದ ಇದ್ದರು.

# ಜಿಸಿಟಿಎಂ ಕಾಲೇಜಿನ ಪ್ರಾಂಶುಪಾಲರಾಗಿ ಡಾ.ಅರ್ಜುನ ಗೊಳಸಂಗಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಲಕೋಟಿಯ ಜಿ.ಸಿ.ಟಿ.ಎಂ. ಪದವಿ ಪೂರ್ವ ಕಾಲೇಜಿನ ನೂತನ ಪ್ರಾಂಶುಪಾಲರಾಗಿ ಡಾ.ಅರ್ಜುನ ಗೊಳಸಂಗಿ ಆಯ್ಕೆಯಾಗಿದ್ದಾರೆ.

ಕಳೆದ ಹಲವು ದಶಕಗಳಿಂದ ಬೋಧನೆ ಸೇರಿದಂತೆ ಸಾಹಿತ್ಯಿಕ – ಸಂಘಟನಾತ್ಮಕ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಡಾ.ಅರ್ಜುನ ಗೊಳಸಂಗಿ ಸದ್ಯ ಜಿಲ್ಲೆಯ ಪದವಿ ಪೂರ್ವ ಕಾಲೇಜು ಕನ್ನಡ ಉಪನ್ಯಾಸಕ ವೇದಿಕೆಯ ಅಧ್ಯಕ್ಷರೂ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರೂ, ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರೂ, ಗದಗ ಡಾ.ಎಂ.ಎಂ.ಕಲಬುರ್ಗಿ ಸಂಶೋಧನಾ ಕೇಂದ್ರದ ಸಂಯೋಜಕರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.




ಸಾಹಿತಿಗಳು, ಸಂಘಟಿಕರೂ ಹಾಗೂ ಅತ್ಯಂತ ಕ್ರಿಯಾಶೀಲರೂ ಆಗಿರುವ ಡಾ.ಅರ್ಜುನ ಗೊಳಸಂಗಿ ಅವರನ್ನು ಅನೇಕರು ಅಭಿನಂದಿಸಿದ್ದಾರೆ.

# ಹಬ್ಬದ ದಿನವೇ ಸರಗಳ್ಳತನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವರಮಹಾಲಕ್ಷ್ಮೀ ಹಬ್ಬದ ದಿನವೇ ಸಂಜೆ ಪಟ್ಟಣದ ಬಸ್ ನಿಲ್ದಾಣದಲ್ಲಿ ಕಳ್ಳರು ಮಹಿಳೆಯರ ಮಾಂಗಲ್ಯ ಸರ ದೋಚಿ ಪರಾರಿಯಾದ ಘಟನೆ ಜರುಗಿದೆ.



ಶುಕ್ರವಾರ ವರಮಹಾಲಕ್ಷ್ಮೀ ಹಬ್ಬ ಮತ್ತು ಪಟ್ಟಣದ ಸಂತೆ ದಿನವಾದ್ದರಿಂದ ಸಂಜೆ ವೇಳೆ ಪಟ್ಟಣದ ಬಸ್ ನಿಲ್ದಾಣ ಜನದಟ್ಟಣೆಯಿಂದ ಕೂಡಿತ್ತು. ಈ ವೇಳೆ ಹೊಸರಿತ್ತಿ ಮಾರ್ಗದ ಬಸ್‌ನಲ್ಲಿ ಹತ್ತುವ ವೇಳೆ ಕಳ್ಳರು ತಮ್ಮ ಕರಾಮತ್ತು ತೋರಿದ್ದಾರೆ. ಸಿದ್ದಾಪುರ ಗ್ರಾಮದ ಮಹಿಳೆಯರಾದ ನೇತ್ರಾವತಿ ಮಠದ, ರತ್ನವ್ವ ಕುರಿ ಹಾಗೂ ಶಿಗ್ಲಿ ಗ್ರಾಮದ ಗರ್ಭಿಣಿ ಮಹಿಳೆ ಸೌಮ್ಯ ಮಾದನಹಳ್ಳಿ ಸೇರಿ ನಾಲ್ಕು ಜನ ಮಹಿಳೆಯರ ಸರ ಕತ್ತರಿಸಿದ್ದಾರೆ. ಇಷ್ಟಾದರೂ ಕಳ್ಳತನ ಯಾರ ಗಮನಕ್ಕೂ ಬರಲಿಲ್ಲ. ಬಸ್ಸು ಪೊಲೀಸ್ ಠಾಣೆ ಹತ್ತಿರ ಹಾದು ಹೋಗುವಾಗ ಓರ್ವ ಮಹಿಳೆಗೆ ಗೊತ್ತಾಗಿ ಕಿರುಚಾಡಿದ್ದಾಳೆ. ಆಗಲೇ ಎಲ್ಲರೂ ತಮ್ಮ ಕೊರಳನ್ನು ನೋಡಿಕೊಂಡಿದ್ದಾರೆ. ಚಾಲಕ ಬಸ್ ನಿಲ್ಲಿಸಿದಾಗ ಸರ ಕಳೆದುಕೊಂಡ ಮಹಿಳೆಯರು ಠಾಣೆಗೆ ತೆರಳಿ ದೂರು ನೀಡಿದ್ದಾರೆ. ಬಸ್ಸಿನಲ್ಲಿಯೇ ಮಾಂಗಲ್ಯ ಸರದ ಒಂದಷ್ಟು ಗುಂಡುಗಳು ಸಿಕ್ಕಿವೆ. ಈ ಕುರಿತು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶುಕ್ರವಾರವಷ್ಟೇ ವರಮಹಾಲಕ್ಷ್ಮೀ ಹಬ್ಬದ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಸಾಮಾಜಿಕ ಜಾಲತಾಣಗಳ ಮೂಲಕ ಎಚ್ಚರಿಕೆಯ ಸಂದೇಶ ತಲುಪಿಸಿ ಜಾಗೃತಿ ಮೂಡಿಸುವ ಕೆಲಸ ಮಾಡಿದ್ದಾರೆ. ಲಕ್ಷ್ಮೇಶ್ವರದ ಬಸ್ ನಿಲ್ದಾಣದಲ್ಲಿ ಇಂತಹ ಕಳ್ಳತನದ ಪ್ರಕರಣಗಳು ಹೆಚ್ಚುತ್ತಿದ್ದು, ಉತ್ತಮ ಗುಣಮಟ್ಟದ ಸಿಸಿ ಕ್ಯಾಮರಾ ಅಳವಡಿಸಬೇಕು ಮತ್ತು ಪೊಲೀಸರು ಹೆಚ್ಚಿನ ನಿಗಾ ವಹಿಸಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.


ಕರ್ನಾಟಕ ಸರಕಾರ

**ಪೌರಾಡಳಿತ ಇಲಾಖೆ**

**ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ– 582117**

(ಜಿಲ್ಲೆ: ಗದಗ, ತಾ: ಗದಗ, ರಾಜ್ಯ: ಕರ್ನಾಟಕ)

ಇ–ಮೇಲ್: ka.mulagunda.tp@gmail.com ವೈಬ್‌ಸೈಟ್: mulagundatown.mrc.gov.in

ದೂರವಾಣಿ: 08372-280128

ಕ್ರ.ಸಂ:ಪ.ಪಂ.ಮು/ಆಡಳಿತ.ವಿಭಾಗ/ಅಲ್ಪಾವದಿ.ಟೆಂಡರ್.ಪತ್ರ/ವಹಿ– /2025–26 ದಿನಾಂಕ: 06/08/2025.

**ಅಲ್ಪಾವಧಿ ಟೆಂಡರ್ ಪ್ರಕಟಣೆ**

**ಕರ್ನಾಟಕ ಪಬ್ಲಿಕ್ ಪ್ರೋಕ್ಯೂರ್‌ಮೆಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ–2000ರ ಪ್ರಕಾರ "ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್" ಪದ್ದತಿಯಲ್ಲಿ ಸನ್ 2025–26ನೇ ಸಾಲಿನ ಪಟ್ಟಣ ಪಂಚಾಯತ ಸಾಮಾನ್ಯ ನಿಧಿ ಅನುದಾನದಡಿ ಇಂಡೆಂಟ ನಂಬರ ಸಂಖ್ಯೆಗಳು–**DMA/2025-26/SE5856,** ಕಂಪ್ಯೂಟರ್ ಆಪರೇಟರ್/ಡಾಟಾ ಎಂಟ್ರಿ ಆಪರೇಟರ್ ಹೊರಗುತ್ತಿಗೆ ಮತ್ತು ಬೆಳಗಿನ ಪೌರಕಾರ್ಮಿಕರ ಉಪಹಾರ ಪೂರೈಕೈ ಮಾಡಲು ಇಂಡೆಂಟ ನಂಬರ ಸಂಖ್ಯೆಗಳು–**DMA/2025-26/SE5859** ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ–ಪ್ರೋಕ್ಯೂರ್‌ಮೆಂಟ್ ದಾಖಲೆಗಳಿಗಾಗಿ http://kppp.karnataka.gov.in ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವದು.

(1) ಇ–ಪ್ರೋಕ್ಯೂರಮೆಂಟ್ ಪದ್ದತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 14–08–2025 ಸಂಜೆ:4.00** ಗಂಟೆಗೆ. (2) ಇ–ಪ್ರೋಕ್ಯೂರಮೆಂಟ್ ಪದ್ದತಿಯಲ್ಲಿ ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 16–08–2025 ಸಂಜೆ:4:30** ಗಂಟೆಗೆ. (3) ಇ–ಪ್ರೋಕ್ಯೂರಮೆಂಟ್ ಪದ್ದತಿಯಲ್ಲಿ ಆರ್ಥಿಕ ಬಿಡ್ ತೆರೆಯುವ **ದಿನಾಂಕ: 18–08–2025 ಸಂಜೆ:4:30** ಗಂಟೆಗೆ.

ನಿಗಧಿ ಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವದು. ಯಾವುದೇ ತಿದ್ದು ಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಚೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಚೇರಿಯ ವೆಬ್‌ಸೈಟ್ http://www.mulagundatown.mrc.gov.in ಹಾಗೂ ಕಛೇರಿ ವೇಳೆಯಲ್ಲಿ ಸಂಭಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ–ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ್ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/–(ಶ್ರೀ.ಮಂಜುನಾಥ ಪಿ ಗುಳೇದ)** ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಮುಳಗುಂದ

**ಸಹಿ/– ( ಶ್ರೀಮತಿ.ಯಲ್ಲವ್ವ ಕೋಂ.ಬ ಕವಲೂರ)** ಅಧ್ಯಕ್ಷರು, ಪಟ್ಟಣ ಪಂಚಾಯತ ಮುಳಗುಂದ

ವಾ.ಸಾ.ಇ/ಗದಗ/227/ದೇಶಪಾಂಡೆಪಬ್ಲಿಸಿಟಿ/2025–26


### ಕೊನೆಗೂ ಈಡೇರಿದ ಶಿಗ್ಲಿ ಗ್ರಾಮದ ಜನರ ಬಹುದಿನದ ಬೇಡಿಕೆ

# ಶಿಗ್ಲಿಗೆ ಮಂಜೂರಾದ ಪ್ರೌಢಶಾಲೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಶಿಗ್ಲಿ

ಗದಗ ಜಿಲ್ಲೆಯ ಸಾಹಿತ್ಯ ಶಿಕ್ಷಣ ಕ್ಷೇತ್ರಕ್ಕೆ ಶ್ರೇಷ್ಠವಾದ ಕೊಡುಗೆ ನೀಡಿದ ಶಿಗ್ಲಿ ಗ್ರಾಮದ ಜನರ ಬಹುದಿನದ ಬೇಡಿಕೆಯಾಗಿದ್ದ ಸರಕಾರಿ ಪ್ರೌಢಶಾಲೆಯ ಕನಸು ಇದೀಗ ನನಸಾಗಿದೆ.



ಶಿಗ್ಲಿ ಗ್ರಾಮಕ್ಕೆ ಶಿಗ್ಲಿ ಸೇರಿ ಸುತ್ತಲಿನ ಹಲವು ಗ್ರಾಮಗಳ ಬಡ ವಿದ್ಯಾರ್ಥಿಗಳು ಪ್ರಾಥಮಿಕ, ಪ್ರೌಢ ಶಿಕ್ಷಣಕ್ಕಾಗಿ ಬರುತ್ತಾರೆ. ಆದರೆ ಗ್ರಾಮೀಣ ಭಾಗದ ಬಡ ಮಕ್ಕಳಿಗೆ ಇಲ್ಲಿ ಸರ್ಕಾರಿ ಪ್ರೌಢ ಶಿಕ್ಷಣದ ಕೊರತೆಯಿತ್ತು. ಹೈಸ್ಕೂಲ್ ಶಿಕ್ಷಣಕ್ಕಾಗಿ ಅನೇಕ ವರ್ಷಗಳಿಂದ ಈ ಭಾಗದ ಜನಪ್ರತಿನಿಧಿಗಳು, ಶಿಕ್ಷಣ ಪ್ರೇಮಿಗಳು, ಅಧಿಕಾರಿಗಳು ಪ್ರಯತ್ನ ಮಾಡುತ್ತಲೇ ಇದ್ದರು. ಕಳೆದ 2 ವರ್ಷದಿಂದ ಶಾಸಕ ಡಾ. ಚಂದ್ರು ಲಮಾಣಿಯವರ ವಿಶೇಷ ಪ್ರಯತ್ನದ ಫಲವಾಗಿ ಈ ಬೇಡಿಕೆ ಈಡೇರಿದಂತಾಗಿದೆ.

ಗ್ರಾಮಕ್ಕೆ ಪ್ರಸ್ತುತ ಶೈಕ್ಷಣಿಕ ವರ್ಷದಿಂದಲೇ ಸರ್ಕಾರಿ 8ನೇ ತರಗತಿಯಿಂದ 10ನೇ ತರಗತಿಯವರಗೆ ಈಗಿರುವ ಶಿಗ್ಲಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲೇ (ಉನ್ನತೀಕರಿಸಿದ ಸರಕಾರಿ ಮಾದರಿ ಶಾಲೆಯಾಗಿ) ಶೈಕ್ಷಣಿಕ ಕಾರ್ಯಚಟುವಟಿಕೆ ಪ್ರಾರಂಭಿಸುವಂತೆ ಇಲಾಖೆ ಆದೇಶ ಹೊರಡಿಸಿದೆ. ಇದು ಶಿಗ್ಲಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಮಕ್ಕಳಿಗೆ ಅನೂಕೂಲವಾಗಲಿದೆ. ಆದೇಶವಾಗಿರುವ ಸುದ್ದಿ ತಿಳಿಯುತ್ತಿದ್ದಂತೆ ಗ್ರಾಮದಲ್ಲಿ ಸಂಭ್ರಮದ ವಾತಾವರಣ ಕಂಡುಬಂದಿತು. ಶುಕ್ರವಾರ ಶಾಲೆಯಲ್ಲಿ ಗ್ರಾಮಸ್ಥರು, ಎಸ್‌ಡಿಎಂಸಿಯವರು ಸೇರಿ ಶಿಕ್ಷಕರಿಗೆ ಹಾಗೂ ಮಕ್ಕಳಿಗೆ ಸಿಹಿ ವಿತರಿಸಿ ಸಂಭ್ರಮಿಸಿದರು.

> ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯು ಒಂದೂವರೆ ಶತಮಾನವನ್ನು ಪೂರೈಸಿದ್ದು, ಈ ಶಾಲೆಗೆ ಪ್ರೌಢಶಾಲೆ ಮಂಜೂರಿಯಾಗಿರುವದು ಹೆಮ್ಮೆಯ ಸಂಗತಿಯಾಗಿದೆ. ಪ್ರೌಢಶಾಲೆ ಮಂಜೂರಿಯಾಗಲು ಶ್ರಮಿಸಿದ ಶಾಸಕರಿಗೆ, ಮಾಜಿ ಶಾಸಕರಿಗೆ, ಇಲ್ಲಿನ ಶಿಕ್ಷಣ ಪ್ರೇಮಿಗಳಿಗೆ, ಗ್ರಾಮಸ್ಥರಿಗೆ ಹಾಗೂ ಶಿಕ್ಷಣ ಇಲಾಖೆಗೆ ಅಭಿನಂದಿಸುವದಾಗಿ ಗ್ರಾ.ಪಂ ಸದಸ್ಯ ಯಲ್ಲಪ್ಪ ತಳವಾರ ಹೇಳಿದರು.

ಈ ವೇಳೆ ಸಂತೋಷ ತಾಂದಳೆ, ವಿರೂಪಾಕ್ಷಪ್ಪ ಶಿರಹಟ್ಟಿ, ಆದೇಶ ಹುಲಗೂರ, ಎಸ್‌ಡಿಎಂಸಿ ಅಧ್ಯಕ್ಷ ರಾಮಣ್ಣ ಬೂದಿಹಾಳ ಹಾಗೂ ಸದಸ್ಯರು, ಮುಖ್ಯೋಪಾಧ್ಯಾಯೆ ಎನ್.ವಿ. ಕುಲಕರ್ಣಿ, ಆರ್.ಡಿ. ಕಾಲಾಯಗರ, ಎಸ್.ಬಿ. ಅಣ್ಣಿಗೇರಿ, ಆರ್.ಎಫ್. ಕಪ್ಪತ್ತನವರ, ತಿಪ್ಪನಾಯಕ್ ಎಲ್., ದೀಪಾ ಭಸ್ಮೆ ಮುಂತಾದವರು ಪ್ರೌಢಶಾಲೆ ಮಂಜೂರಿಯಾಗಿರುವದಕ್ಕೆ ಹರ್ಷ ವ್ಯಕ್ತಪಡಿಸಿ ಸರಕಾರಕ್ಕೆ ಹಾಗೂ ಶಿಕ್ಷಣ ಇಲಾಖೆಗೆ ಅಭಿನಂದನೆ ಸಲ್ಲಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka